ಸಂಪುಟ : 9 ಸಂಚಿಕೆ 310 ಪುಟ : 4+2 ಬೆಲೆ: 3.00 ಶುಕ್ರವಾರ ಜನವರಿ 24 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 310 Pages : 4+2 Price : 3.00 Friday January 24 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಜನವರಿ 24ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

**ಸ್ಥಳಗಳ ವಿವರ:** ವಾರ್ಡ್ ನಂ. 22 ಗಂಗಿಮಡಿ, ಕನ್ನಡ ಶಾಲೆ, ಅಪಾರ್ಟ್ಮೆಂಟ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 29 ರಾಜೀವಗಾಂಧಿ ನಗರ, ಪಾಪಡೆ ಲೈನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 3 – ಕುಂಬಾರ ಓಣಿ, ರಾಜಾಜಿ ರಸ್ತೆ, ಅಯ್ಯಪ್ಪಜ್ಜನ ಗದ್ದುಗೆ, ಬಣ್ಣದ ನಗರ ಪೂರ್ತಿ ಭಾಗಗಳು, ಹುಯಿಲಗೋಳ ರಸ್ತೆ ಎಡಭಾಗ ಮತ್ತು 4 ಭಾಗಗಳು ಕಬಾಡೆಯವರ ಲೈನ್ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 11, 12 – ಇರಾನಿ ಕಾಲೋನಿ, ಕರಿಯಮ್ಮ ಕಲ್ಲು, ಪಾದಗಟ್ಟಿ, ಗಣಪತಿ ಕಟ್ಟಿ, ಚರ್ಚ್, ಗಾಣಿಗೇರ ಭವನ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 16, 21 – ರಹಮತ್ ನಗರ 4 ಭಾಗಗಳು, ಕುಂಬೇಶ್ವರ ನಗರ 4 ಭಾಗಗಳು, ಗುಡದೂರ ಸ್ವಾಮಿ ಮಠ ಎಡಭಾಗ ಬಲಭಾಗ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 6 – ಕನ್ಯಾಳ ಅಗಸಿ, ಅಂಬೇಡ್ಕರ್ ಓಣಿ, ಭಜಂತ್ರಿ ಓಣಿ, ಹೂಲಿಯವರ ಲೈನ್, ಹಾದಿಮನಿಯವರ ಲೈನ್, ಜಮಲಮ್ಮನ ಗುಡಿ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 34, 30 – 46 ಪ್ಲಾಟ್, ಕೊರವರ ಓಣಿ, ವಡ್ಡರಗೇರಿ, ಮೂರು ಶೀಳ್ಳಿನ ವಕಾರ, ಡಿಪೋ ಹಿಂದಿನ ಭಾಗ ಶಿವಾನಂದ ಗಾರ್ಡನ್ ಕೆಲವು ಭಾಗಗಳು.

**ಪ್ರಕಟಣೆ** : ಗದಗ-ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, ತುಂಗಭದ್ರಾ ನದಿಯಿಂದ ಸರಬರಾಜು ಆಗುತ್ತಿರುವ ನೀರನ್ನು ಕಾಯಿಸಿ ಆರಿಸಿ ಕುಡಿಯಲು ನಿರ್ದೇಶನ ನೀಡಲಾಗಿದೆ ಹಾಗೂ ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ತಿಳಿಸಿರುತ್ತಾರೆ. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ ಮಾಡಲಾಗುವುದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜ.25ರಂದು ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಮಕ್ಕಳಿಗೆ 2024-25ನೇ ಸಾಲಿನ ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮ ಜನವರಿ 25 ರಂದು ಶನಿವಾರ ಬೆಳಿಗ್ಗೆ 10 ಗಂಟೆಗೆ ಲೋಯಲಾ ಪ್ರೌಢ ಶಾಲೆ ಬೆಟಗೇರಿ-ಗದಗ ಇಲ್ಲಿ ಆಯೋಜಿಸಲಾಗಿದೆ.

ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮಕ್ಕೆ ತಾಲೂಕಾ ಮಟ್ಟದಲ್ಲಿ ಜರುಗಿದ ಪ್ರತಿಭಾ ಕಾರಂಜಿ ಕಾರ್ಯಕ್ರಮದಲ್ಲಿ ವೈಯಕ್ತಿಕ ಹಾಗೂ ಗುಂಪು ವಿಭಾಗದಲ್ಲಿ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿಗಳು ಭಾಗವಹಿಸಬಹುದಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ದೆಹಲಿ ಗಣರಾಜ್ಯೋತ್ಸವ ಸ್ತಬ್ಧಚಿತ್ರ-2025 । ಪೂರ್ವಾಭ್ಯಾಸದಲ್ಲಿಯೇ ಅಪಾರ ಮೆಚ್ಚುಗೆ

# ರಾಜ್ಯದ ಸ್ತಬ್ಧಚಿತ್ರಕ್ಕೆ ಪ್ರಶಸ್ತಿ ಲಭಿಸುವ ವಿಶ್ವಾಸ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯದ ಪರವಾಗಿ ಗಣರಾಜ್ಯೋತ್ಸವದ ಪಥಸಂಚಲನದಲ್ಲಿ ಪಾಲ್ಗೊಳ್ಳುವ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಪ್ರತಿ ವರ್ಷ ತನ್ನ ವೈಶಿಷ್ಟಪೂರ್ಣ ಸ್ತಬ್ಧಚಿತ್ರಗಳ ಮೂಲಕವೇ ದೇಶದ ಗಮನ ಸೆಳೆಯುತ್ತಿದ್ದು, ಈ ಬಾರಿ 'ಲಕ್ಕುಂಡಿಯ ಶಿಲ್ಪಕಲೆಯ ತೊಟ್ಟಿಲು' ವಿಷಯಾಧಾರಿತ ಸ್ತಬ್ಧಚಿತ್ರವು ಅತ್ಯಾಕರ್ಷಣೀಯವಾಗಿದ್ದು, ಗಣರಾಜ್ಯೋತ್ಸವದಲ್ಲಿ ಭಾಗವಹಿಸಲಿರುವ ರಾಜ್ಯದ ಸ್ತಬ್ಧಚಿತ್ರವು ಪ್ರಶಸ್ತಿ ಪಡೆಯುವ ವಿಶ್ವಾಸವಿದೆ ಎಂದು ವಾರ್ತಾ ಇಲಾಖೆಯ ಆಯುಕ್ತರಾದ ಹೇಮಂತ ನಿಂಬಾಳ್ಕರ್ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.ಈ ಬಾರಿಯ ಗಣರಾಜ್ಯೋತ್ಸವದಲ್ಲಿ ರಾಜ್ಯದಿಂದ ಭಾಗವಹಿಸಲಿರುವ ಸ್ತಬ್ಧಚಿತ್ರವು ಗದಗಿನ ಲಕ್ಕುಂಡಿಯಲ್ಲಿರುವ ಮಂದಿರಕ್ಕೆ ಹೋಲುವಂತಿರುವ ಸ್ತಬ್ಧಚಿತ್ರವನ್ನು




ಅಂತಾರಾರಾಷ್ಟ್ರೀಯ ಕಲಾವಿದ ಶಶಿಧರ ಅಡಪ ವಿನ್ಯಾಸಗೊಳಿಸಿದ್ದು, ದೆಹಲಿಯ ರಾಷ್ಟ್ರೀಯ ರಂಗಶಾಲಾ ಕ್ಯಾಂಪ್‌ನಲ್ಲಿ ಕಳೆದ ಒಂದು ತಿಂಗಳಿನಿಂದ ರಾಜ್ಯದ 50ಕ್ಕೂ ಹೆಚ್ಚು ಜನ ಕಲಾವಿದರು, ಕುಶಲಕರ್ಮಿಗಳು ಮೈಕೊರೆಯುವ ಚಳಿಯಲ್ಲಿ ಸ್ತಬ್ಧಚಿತ್ರವನ್ನು ನಿರ್ಮಿಸಿದ್ದಾರೆ.

ಜ.23ರ ಗುರುವಾರ ನವದೆಹಲಿಯ ಕರ್ತವ್ಯ ಪಥದಲ್ಲಿ ಗಣರಾಜ್ಯೋತ್ಸವ ಅಂಗವಾಗಿ ನಡೆದ ಸ್ತಬ್ಧಚಿತ್ರದ ಪೂರ್ವಾಭ್ಯಾಸದಲ್ಲಿ ರಾಜ್ಯದ ಲಕ್ಕುಂಡಿ ಶಿಲ್ಪಕಲೆಯ ತೊಟ್ಟಿಲು ಸ್ತಬ್ಧಚಿತ್ರಕ್ಕೆ ಅಪಾರ ಪ್ರಶಂಸೆ ವ್ಯಕ್ತವಾಗಿದೆ. ಕರ್ತವ್ಯಪಥದಲ್ಲಿ ಸೇರಿದ ಜನರಿಂದ ನಿರೀಕ್ಷೆಗೂ ಮೀರಿ ಬಂದ ಪ್ರತಿಕ್ರಿಯೆಗೆ ಈ ಬಾರಿಯ ಗಣರಾಜ್ಯೋತ್ಸವದಲ್ಲಿ ಪಾಲ್ಗೊಳ್ಳುವ ರಾಜ್ಯದ ಸ್ತಬ್ಧಚಿತ್ರಕ್ಕೆ ಪ್ರಶಸ್ತಿ ದೊರೆಯಲಿದೆ ಎಂಬ ವಿಶ್ವಾಸವನ್ನು ಆಯುಕ್ತರಾದ ಹೇಂಮಂತ್ ನಿಂಬಾಳ್ಕರ್ ವ್ಯಕ್ತಪಡಿಸಿದರು.

ಕರ್ತವ್ಯ ಪಥದಲ್ಲಿ ಸಾಗಿದ ಸ್ತಬ್ಧಚಿತ್ರಕ್ಕೆ ಕನ್ನಡ ಸಾಹಿತ್ಯ ಇರುವ 'ಶಿಲ್ಪಕಲೆಯ ತೊಟ್ಟಿಲು ನಮ್ಮ ಗದುಗಿನ ಲಕ್ಕುಂಡಿ' ಎಂಬ ಹಾಡಿಗೆ ಹೆಸರಾಂತ ಕಲಾವಿದ ಪ್ರವೀಣ ಡಿ.ರಾವ್ ಸಂಗೀತ ಸಂಯೋಜನೆಯ ನಿನಾದಕ್ಕೆ ಗದಗ, ಬೆಂಗಳೂರು, ಮೈಸೂರು ಹಾಗೂ ಧಾರವಾಡದಿಂದ ಆಗಮಿಸಿದ ಸ್ತಬ್ಧಚಿತ್ರದ ಕಲಾವಿದರು ಸಾಂಪ್ರದಾಯಿಕ ಉಡುಗೆಯಲ್ಲಿ ಕಂಗೊಳಿಸಿ ಹೆಚ್ಚಿನ ಮೆರಗು ತಂದಿದ್ದಲ್ಲದಲೇ ಅಲ್ಲಿ ಸೇರಿದವರನ್ನು ರೋಮಾಂಚನಗೊಳಿಸಿತು.

ಸ್ತಬ್ಧಚಿತ್ರದ ಮುಂಭಾಗವು ಬ್ರಹ್ಮ ಜಿನಾಲಯ ದೇವಸ್ಥಾನದ ಬ್ರಹ್ಮನ ಪ್ರತಿಮೆಯನ್ನು ಹೊಂದಿದೆ. ಇದು ಲಕ್ಕುಂಡಿಯಲ್ಲಿರುವ ಅತ್ಯಂತ ಹಳೆಯ ಜೈನ ದೇವಾಲಯವಾಗಿದ್ದು, ಭಗವಾನ್ ಮಹಾವೀರನಿಗೆ ಸಮರ್ಪಿತವಾಗಿದೆ. ಅದರ ನಂತರ ಬ್ರಹ್ಮ ಜಿನಾಲಯ ದೇವಸ್ಥಾನದ ತೆರೆದ ಕಂಬದ ಮಂಟಪವಿದೆ. ಸ್ತಬ್ಧಚಿತ್ರದ ಮುಖ್ಯ ವಿಭಾಗವು ಭವ್ಯವಾದ ಮತ್ತು ಅಲಂಕೃತವಾದ ಕಾಶಿ ವಿಶ್ವೇಶ್ವರ ದೇವಸ್ಥಾನ ಮತ್ತು ಶಿವನಿಗೆ ಸಮರ್ಪಿತವಾದ ನನ್ನೇಶ್ವರ ದೇವಸ್ಥಾನವನ್ನು ಪ್ರದರ್ಶಿಸುತ್ತದೆ.

▸▸ 3ನೇ ಪುಟಕ್ಕೆ

### ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆ, ದೇಸೀ ಆಟ ಕಾರ್ಯಕ್ರಮದ ಪೂರ್ವಭಾವಿ ಸಭೆಯಲ್ಲಿ ಬಾಲ ವಿಕಾಸ ಅಕಾಡೆಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ

# ಮಕ್ಕಳ ರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿ

■ ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳ ರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಮಕ್ಕಳ ರಕ್ಷಣಾ ಕಾರ್ಯವು ಕೇವಲ ಒಂದು ಇಲಾಖೆಗೆ ಮಾತ್ರ ಸೀಮಿತವಾಗಿರದೇ ಎಲ್ಲ ಇಲಾಖೆಗಳ ಜವಾಬ್ದಾರಿಯೂ ಆಗಿದೆ ಎಂದು ಕರ್ನಾಟಕ ಬಾಲ ವಿಕಾಸ ಅಕಾಡೆಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆ ಹಾಗೂ ದೇಸೀ ಆಟ ಕಾರ್ಯಕ್ರಮದ ಪೂರ್ವಭಾವಿ ಸಭೆಯ ಅಧ್ಯಕ್ಷತೆ



ವಹಿಸಿ ಅವರು ಮಾತನಾಡಿದರು.

ಬಾಲ್ಯ ವಿವಾಹವನ್ನು ತಡೆಗಟ್ಟುವ ಜವಾಬ್ದಾರಿಯು ಗ್ರಾಮ ಮಟ್ಟದ ಅಧಿಕಾರಿಗಳಿಂದ ಹಿಡಿದು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳವರೆಗೆ ಇರುತ್ತದೆ. ಶಿಕ್ಷಣ ಇಲಾಖೆಯವರು ಶಾಲೆಯಿಂದ ಹೊರಗುಳಿದ ಮಕ್ಕಳ ಕುರಿತು ನಿಗಾ ವಹಿಸಬೇಕು. ಈ ಕುರಿತು ಪ್ರತಿ ತಿಂಗಳು ಜಿಲ್ಲಾಧಿಕಾರಿಗಳಿಗೆ ಮಾಹಿತಿ ಒದಗಿಸಬೇಕು. ಬಾಲ ಮಂದಿರದಲ್ಲಿ ಮೂಲಭೂತ ಸೌಕರ್ಯಗಳು ಇರುವಂತೆ ನೋಡಿಕೊಳ್ಳಬೇಕು. ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಹಾಸ್ಟೆಲ್‌ಗಳಲ್ಲಿ ಮಕ್ಕಳಿಗೆ ಶುದ್ಧ ಕುಡಿಯುವ ನೀರು, ಪೌಷ್ಟಿಕ ಆಹಾರ ವಿತರಿಸಲಾಗುತ್ತಿದೆಯೇ ಎಂಬುದನ್ನು ಪರಿಶೀಲಿಸಬೇಕು.

ಗರ್ಭಿಣಿಯರಿಗೆ ಪೌಷ್ಟಿಕ ಆಹಾರ ವಿತರಣೆಯಲ್ಲಿ ವಿಳಂಬವಾಗಬಾರದು. ಇತ್ತೀಚಿನ ದಿನಗಳಲ್ಲಿ ಮಕ್ಕಳು ಮಾದಕ ವಸ್ತುಗಳ ವ್ಯಸನಿಗಳಾಗುತ್ತಿರುವುದು ಆತಂಕಕಾರಿ ವಿಷಯವಾಗಿದೆ. ಪೊಲೀಸ್ ಇಲಾಖೆಯವರು ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ಮಕ್ಕಳಿಗೆ ಮಾದಕ ವ್ಯಸನದಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ಅರಿವು ಕಾರ್ಯಕ್ರಮವನ್ನು ಹಮ್ಮಿಕೊಳ್ಳಬೇಕು ಎಂದು ತಿಳಿಸಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಮಾತನಾಡಿ, ದೇಸೀ ಆಟಗಳ ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವಾರಿ ಸಚಿವರ ಮಾರ್ಗದರ್ಶನದಲ್ಲಿ ವಿವಿಧ ಇಲಾಖೆಯ ಸಹಯೋಗದೊಂದಿಗೆ ವ್ಯವಸ್ಥಿತವಾಗಿ ಮಾಡಲಾಗುವುದು. ಸದರಿ ಕಾರ್ಯಕ್ರಮವನ್ನು ಯಶಸ್ವಿಯಾಗಿ ನಿರ್ವಹಿಸಿ ಜಿಲ್ಲೆಯನ್ನು ಮಾದರಿಯಾಗಿಸುವ ನಿಟ್ಟಿನಲ್ಲಿ ಪ್ರಯತ್ನಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಡಿಎಸ್‌ಪಿ ಇನಾಮದಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಪದ್ಮಾವತಿ ಜಿ, ನಿರೂಪಣಾಧಿಕಾರಿ ರಾಧಾ ಮಣ್ಣೂರ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರುಡಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಎಸ್. ನೀಲಗುಂದ, ಕ್ರೀಡಾ ಹಾಗೂ ಯುವಜನ ಸಬಲೀಕರಣ ಇಲಾಖೆ ಅಧಿಕಾರಿ ಶರಣು ಗೋಗೇರಿ, ಮಕ್ಕಳ ರಕ್ಷಣಾಧಿಕಾರಿ ರಫೀಕಾ ಹಳ್ಳೂರ, ಸಿಡಿಪಿಓಗಳು, ವಿವಿಧ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿಗಳು ಹಾಜರಿದ್ದರು.

ಬಾಲ ವಿಕಾಸ ಅಕಾಡೆಮಿ ಯೋಜನಾಧಿಕಾರಿ ಭಾರತಿ ಶೆಟ್ಟರ ಸ್ವಾಗತಿಸಿ ವಂದಿಸಿದರು.

**ದೇಸೀ ಆಟಗಳಿಗೆ ಪ್ರೋತ್ಸಾಹ**

ದೇಸೀ ಆಟಗಳ ಕಾರ್ಯಕ್ರಮವನ್ನು ಆಯೋಜಿಸುವ ಮೂಲಕ ಗ್ರಾಮೀಣ ಸೊಗಡನ್ನು ಉಳಿಸಿ-ಬೆಳೆಸುವುದು ಅವಶ್ಯಕವಾಗಿದೆ. ಕಾರಣ, ಇಂದಿನ ಮಕ್ಕಳಿಗೆ ದೇಸೀ ಆಟಗಳನ್ನು ಆಡಲು ಪ್ರೋತ್ಸಾಹಿಸುವುದು ಮುಖ್ಯವಾಗಿದೆ. ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಅವರೊಂದಿಗೆ ಸಮಾಲೋಚಿಸಿ ದೇಸೀ ಆಟಗಳ ಕಾರ್ಯಕ್ರಮವನ್ನು ಗದಗ ಜಿಲ್ಲೆಯಲ್ಲಿ ಸಂಘಟಿಸಲಾಗುವುದು ಎಂದು ಕರ್ನಾಟಕ ಬಾಲ ವಿಕಾಸ ಅಕಾಡೆಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ ಹೇಳಿದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಾತನಾಡಿ, ಮಕ್ಕಳ ರಕ್ಷಣೆಗೆ ಸಮಾಜದ ಪ್ರತಿಯೊಬ್ಬರೂ ಶ್ರಮಿಸಬೇಕಾಗಿದೆ. ಶಾಲೆಗಳಲ್ಲಿ ಶಿಕ್ಷಕರು ವಿದ್ಯಾರ್ಥಿಗಳಿಗೆ ಹದಿಹರೆಯದ ವಯಸ್ಸಿನಲ್ಲಿ ಮಕ್ಕಳಲ್ಲಿ ಆಗುವ ಬದಲಾವಣೆ ಕುರಿತು ತಿಳುವಳಿಕೆ ನೀಡಬೇಕು. ಈ ಜಿಲ್ಲೆಯಲ್ಲಿ ದೇಸೀ ಆಟಗಳ ಕಾರ್ಯಕ್ರಮವನ್ನು ಆಯೋಜಿಸುತ್ತಿರುವುದು ಸಂತಸದ ವಿಷಯವಾಗಿದೆ. ಇದು ನಮ್ಮ ಜಿಲ್ಲೆಗೆ ಹೆಮ್ಮೆಯ ಸಂಗತಿ. ದೇಸೀ ಆಟಗಳಲ್ಲಿ ಮಕ್ಕಳನ್ನು ತೊಡಗಿಸುವಂತೆ ಮಾಡುವುದು ಹಾಗೂ ದೇಸೀ ಆಟಗಳಲ್ಲಿ ಸ್ಪರ್ಧಾ ಮನೋಭಾವ ಹೆಚ್ಚಿಸುವುದು ಮುಖ್ಯವಾಗಿದೆ ಎಂದರು.

## ಲಕ್ಷ್ಮೇಶ್ವರ ಪಟ್ಟಣದ ಅಭಿವೃದ್ಧಿ ಕಾರ್ಯಗಳಾಗಲಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹಾವೇರಿ ಲೋಕಸಭಾ ಕ್ಷೇತ್ರದಲ್ಲಿ ಬರುವ ಗದಗ ಜಿಲ್ಲೆಯ 2ನೇ ಅತಿದೊಡ್ಡ ನಗರ ಎನ್ನಲಾಗುವ ಲಕ್ಷ್ಮೇಶ್ವರ ಪಟ್ಟಣದಲ್ಲಿ ಅನೇಕ ಅಭಿವೃದ್ಧಿ ಕಾರ್ಯಗಳು ಬಾಕಿ ಇದ್ದು, ಅವುಗಳನ್ನು ಈಡೇರಿಸುವಂತೆ ಮಾಜಿ ಮುಖ್ಯಮಂತ್ರಿ, ಸಂಸದ ಬಸವರಾಜ ಬೊಮ್ಮಾಯಿ ಅವರಿಗೆ ಗುರುವಾರ ಲಕ್ಷ್ಮೇಶ್ವರ ವ್ಯಾಪಾರಸ್ಥರ ಸಂಘದ ವತಿಯಿಂದ ವಿವಿಧ ಬೇಡಿಕೆಗಳ ಮನವಿ ಪತ್ರವನ್ನು ಸಲ್ಲಿಸಲಾಯಿತು.

ಈ ಸಮಯದಲ್ಲಿ ವ್ಯಾಪಾರಸ್ಥರ ಸಂಘದವರು ಸಂಸದರೊಂದಿಗೆ ಮಾತನಾಡಿ, ಪಟ್ಟಣದ ಮೂಲಭೂತ ಸೌಕರ್ಯಗಳ ಒಟ್ಟಾರೆ ಅಭಿವೃದ್ಧಿಗಳಾದ ರಸ್ತೆಗಳು, ಪಾದಚಾರಿ ಮಾರ್ಗ, ಒಳಚರಂಡಿ, ಬೀದಿ ದೀಪಗಳು, ಶೌಚಾಲಯಗಳು ಇತ್ಯಾದಿಗಳ ಅಭಿವೃದ್ಧಿಯಾಗಬೇಕಾಗಿದೆ. ಪಟ್ಟಣವು ಸುಮಾರು 50 ಸಾವಿರದಷ್ಟು ಜನಸಂಖ್ಯೆ ಹೊಂದಿದ್ದು, ಇಲ್ಲಿ ಉದ್ಯಾನವನ, ಈಜುಕೊಳ, ಒಳಾಂಗಣ ಕ್ರೀಡಾಂಗಣಗಳು ಇಲ್ಲದಿರುವದು ವಿಷಾದದ ಸಂಗತಿ. ಹಳ್ಳಿಗಳಿಂದ ಪಟ್ಟಣಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಗಳು ತುಂಬಾ ಕಳಪೆ ಸ್ಥಿತಿಯಲ್ಲಿವೆ. ಸಂಪರ್ಕ ರಸ್ತೆ ಸರಿಯಾಗಿಲ್ಲದ ಕಾರಣ ಸಾರ್ವಜನಿಕರು ಪಟ್ಟಣಕ್ಕೆ ಬರಲು ಹಿಂದೇಟುಯುತ್ತಿದ್ದಾರೆ.

ಇದರಿಂದ ವ್ಯಾಪಾರಕ್ಕೆ ತೀವ್ರ ತೊಂದರೆಯಾಗುತ್ತಿದೆ. ಪಟ್ಟಣದಿಂದ ದೊಡ್ಡೂರು, ಸೂರಣಗಿ ಬಾಲೇಹೊಸೂರು, ಪು.ಬಡ್ನಿ, ಕುಂದ್ರಹಳ್ಳಿ, ಸೇರಿದಂತೆ ಅನೇಕ ಹಳ್ಳಿಗಳಿಗೆ ಉತ್ತಮ ಸಂಪರ್ಕ ರಸ್ತೆಗಳನ್ನು ಕಲ್ಪಿಸಬೇಕು. ಯಲವಿಗಿ-ಗದಗ ಹೊಸ ರೈಲು ಮಾರ್ಗದ ಕೆಲಸ ಇನ್ನೂ ಪ್ರಾರಂಭವಾಗಿಲ್ಲ. ಯೋಜನೆಯನ್ನು ಆದಷ್ಟು ಬೇಗ ಪ್ರಾರಂಭಿಸಬೇಕು, ಯಲವಿಗಿ ರೈಲು ನಿಲ್ದಾಣವು ಗದಗ, ಸವಣೂರು ತಾಲೂಕುಗಳ ಜನರಿಗೆ ಹೆಚ್ಚು ಅನೂಕೂಲವಾಗಿದ್ದು, ಇನ್ನೂ ಕೆಲವು ಎಕ್ಸ್‌ಪ್ರೆಸ್ ರೈಲುಗಳ ನಿಲುಗಡೆ ಮಾಡಿದರೆ ಹೆಚ್ಚು ಅನೂಕೂಲವಾಗುವದು ಎಂದು ವಿನಂತಿಸಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಜಿ.ಎಂ. ಮಹಾಂತಶೆಟ್ಟರ, ವ್ಯಾಪಾರಸ್ಥರ ಸಂಘದ ಪದಾಧಿಕಾರಿಗಳಾದ ಅಶೋಕ ಬಟಗುರ್ಕಿ, ಮಾಲತೇಶ ಅಗಡಿ, ಚಂಬಣ್ಣ ಬಾಳಿಕಾಯಿ, ಕುಬೇರಪ್ಪ ಮಹಾಂತಶೆಟ್ಟರ, ಶಕ್ತಿ ಕತ್ತಿ, ಸುನೀಲ ಮಹಾಂತಶೆಟ್ಟರ, ಪ್ರವೀಣ ಬಾಳಿಕಾಯಿ, ಶಿವಯೋಗಿ ಅಂಕಲಕೋಟಿ, ಸಿದ್ದನಗೌಡ ಬಳ್ಳೊಳ್ಳಿ, ಡಿ.ಡಿ. ಮುಥಾ ಸೇರಿದಂತೆ ಅನೇಕರಿದ್ದರು.


## ಗಾಂಜಾ ಸ್ಯಾಂಪಲ್ ದಹನ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿ 31.12.2024ರವರೆಗೆ ಒಟ್ಟು 10 ಪ್ರಕರಣಗಳಲ್ಲಿ ಆರೋಪಿತರನ್ನು ದಸ್ತಗೀರ ಮಾಡಿ ನ್ಯಾಯಾಲಯಕ್ಕೆ ಹಾಜರ ಪಡಿಸಲಾಗಿದೆ. ಆರೋಪಿತರಿಂದ ಸುಮಾರು 1.068 ಕೆಜಿ ಹಸಿ ಮತ್ತು ಒಣ ಗಾಂಜಾವನ್ನು ಜಪ್ತ ಪಡಿಸಿಕೊಂಡು 6 ಪ್ರಕರಣಗಳಲ್ಲಿ ಜಪ್ತಾದ ಗಾಂಜಾವನ್ನು ಸ್ಯಾಂಪಲ್ ಕುರಿತು ಕಾಯ್ದಿರಿಸಿ ಆರ್‌ಎಫ್‌ಎಸ್‌ಎಲ್ ಬೆಳಗಾವಿಗೆ ಕಳುಹಿಸಲಾಗಿದೆ.

ಜಿಲ್ಲಾ ಸತ್ರ ನ್ಯಾಯಾಲಯ ಹಾಗೂ ಜೆಎಂಎಫ್‌ಸಿ ನ್ಯಾಯಾಲಯ ಗದಗ ಪತ್ರ ದಿ. 22.07.2024, 18.07.2024 ಹಾಗೂ 18.01.2025 ನೇದ್ದವುಗಳಲ್ಲಿ ಒಟ್ಟು 15 ಪ್ರಕರಣಗಳಲ್ಲಿ ಕಾಯ್ದಿರಿಸಿದ ಗಾಂಜಾವನ್ನು ನಾಶಪಡಿಸಿ, ವರದಿ ಕಳುಹಿಸುವಂತೆ ಆದೇಶದ ಮೇರೆಗೆ, ಈ ಎಲ್ಲ ಗಾಂಜಾಗಳನ್ನು ಜ.22ರಂದು ಗದಗ-ಬೆಟಗೇರಿ ನರಸಾಪೂರದ ಕೈಗಾರಿಕಾ ಪ್ರದೇಶದ ENVIROTECH PVT LTD ಕೈಗಾರಿಕೆಯಲ್ಲಿ, ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಅವರ ಸಮ್ಮುಖದಲ್ಲಿ ದಹಿಸಲಾಯಿತು.

ಈ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ಅಧೀಕ್ಷಕ ಎಂ.ಬಿ. ಸಂಕದ, ನರಗುಂದ ಡಿಎಸ್‌ಪಿ ಪ್ರಭುಗೌಡ ಡಿ.ಕಿರೆದಳಿ, ಗದಗ ಡಿಎಸ್‌ಪಿ ಜೆ.ಹೆಚ್. ಇನಾಮದಾರ ಮತ್ತು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧೀಕ್ಷಕ ಶಶಿಧರ ಶಂ.ಕೋಡಿಹಳ್ಳಿ ಗದಗ ಹಾಜರಿದ್ದರು.



ಗದಗ: ನಗರದ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಇತ್ತೀಚೆಗೆ ನಿಜ ಶರಣ ಅಂಬಿಗರ ಚೌಡಯ್ಯ ಜಯಂತಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ಕೃಷಿ ನಿರ್ದೇಶಕರು, ಹಾಗೂ ಸಿಬ್ಬಂದಿ ವರ್ಗ ಹಾಜರಿದ್ದರು. ಅಂಬಿಗರ ಚೌಡಯ್ಯನ ವಚನ ಸಾಹಿತ್ಯ ಹಾಗೂ ಸಮಾಜಕ್ಕೆ ಆತನ ಉದಾತ್ತ ಧ್ಯೇಯಗಳ ಕೊಡುಗೆಯನ್ನು ಸ್ಮರಿಸಲಾಯಿತು.

### ಬಿಜೆಪಿಯಲ್ಲಿನ ಬಣ ರಾಜಕೀಯದ ಕುರಿತು ಸ್ಪಷ್ಟನೆ ನೀಡಿದ ಸಂಸದ ಬೊಮ್ಮಾಯಿ


# ಬಿಜೆಪಿಯ ಮನೆ ಬಾಗಿಲು ಒಂದೇ ಇದೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬಿಜೆಪಿ ಮನೆಯೊಂದು ಮೂರು ಬಾಗಿಲು ಆಗಿದೆ ಎನ್ನುವದು ಶುದ್ಧ ಸುಳ್ಳು. ನಮ್ಮ ಬಿಜೆಪಿಯ ಮನೆ ಬಾಗಿಲು ಒಂದೇ ಇದೆ. ಈ ಬಗ್ಗೆ ಯಾರೂ ವಿಚಾರ ಮಾಡುವ ಅವಶ್ಯಕತೆ ಇಲ್ಲ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಲಕ್ಷ್ಮೇಶ್ವರಕ್ಕೆ ಆಗಮಿಸಿದ್ದ ಸಂದರ್ಭದಲ್ಲಿ ಪಟ್ಟಣದ ಮಾಜಿ ಶಾಸಕ ಗಂಗಣ್ಣ ಮಹಾಂತಶೆಟ್ಟರ ಅವರ ನಿವಾಸದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಬಿಜೆಪಿಯಲ್ಲಿನ ಬಣ ರಾಜಕೀಯ ವಿಷಯದ ಕುರಿತು ಸ್ಪಷ್ಟನೆ ನೀಡಿದ ಅವರು, ಪಕ್ಷದಲ್ಲಿ ಆರೋಪ-ಪ್ರತ್ಯಾರೋಪ ಸಹಜ. ಇದು ಅಣ್ಣ-ತಮ್ಮರ ಜಗಳ. ಹಿರಿಯರು ಕೂತು ಬಗೆಹರಿಸುವ ವಿಶ್ವಾಸ ಇದೆ ಎಂದರು.

ರಾಜ್ಯ ಬಿಜೆಪಿ ಮೇಲೆ ಹೈಕಮಾಂಡ್ ನಿಯಂತ್ರಣ ಕಳೆದುಕೊಂಡಿದೆಯೇ ಎಂಬ ಪ್ರಶ್ನೆಗೆ ಉತ್ತರಿಸಿ, ಹೈಕಮಾಂಡ್ ಅವರು ಏನು ಹೇಳುತ್ತಾರೋ ಅದೇ ಅಂತಿಮ. ಬಿಜೆಪಿಯಲ್ಲಿ ಪ್ರಜಾಪ್ರಭುತ್ವ ಇದೆ. ಪಕ್ಷದ ರಾಜ್ಯಾಧ್ಯಕ್ಷರ ಚುನಾವಣೆ ಸುಗಮವಾಗಿ ನಡೆಯುತ್ತದೆ. ಚುನಾವಣೆ ಪ್ರಕ್ರೀಯೆ ಪೂರ್ವದಲ್ಲಿ



ಎಲ್ಲವನ್ನೂ ಬಗೆಹರಿಸುವ ಪ್ರಯತ್ನಗಳು ಆಗುತ್ತಿವೆ. ಚುನಾವಣೆ ನಂತರ ಮತ್ತೆ ಎಲ್ಲರೂ ಒಗ್ಗಟ್ಟಾಗಿ ಕೆಲಸ ಮಾಡುವ ವಿಶ್ವಾಸವಿದೆ ಎಂದು ಹೇಳಿದರು.

ಜನಾರ್ಧನ್ ರೆಡ್ಡಿ ಮತ್ತು ಶ್ರೀ ರಾಮುಲು ಅವರ ಪರಸ್ಪರ ಆರೋಪ ಕುರಿತ ಪ್ರಶ್ನೆಗೆ ಉತ್ತರಿಸಿದ ಸಂಸದ ಬಸವರಾಜ ಬೊಮ್ಮಾಯಿ, ಅವರಿಬ್ಬರೂ ಆತ್ಮೀಯ ಗೆಳೆಯರು, ಎಲ್ಲಿ ಆತ್ಮೀಯತೆ ಇರುತ್ತದೆಯೋ, ಅವರ ನಡುವೆ ಹೆಚ್ಚು-ಕಡಿಮೆ ಭಿನ್ನ-ಬೇಧಗಳು ಬರುವದು ಸಹಜ. ಕೊನೆಯಲ್ಲಿ ಅವರ ಕುಚಿಕು ಗೆಳೆತನ ಗಟ್ಟಿಯಾಗಿ ನಿಲ್ಲುತ್ತದೆ. ನಾನು ರಾಮುಲು ಅವರ ಬಳಿ ಮಾತನಾಡಿದ್ದೇನೆ. ಜನಾರ್ಧನ ರೆಡ್ಡಿ ಬಳಿ ಮಾತನಾಡುತ್ತೇನೆ. ಎಲ್ಲವೂ ಸರಿಯಾಗುತ್ತದೆ. ಇಬ್ಬರೂ ಒಂದಾಗಿ ಬರುವ ದಿನಗಳಲ್ಲಿ ಒಗ್ಗಟ್ಟಿನಿಂದ ಬಿಜೆಪಿ ಕಟ್ಟುವ ಕೆಲಸ ಮಾಡುತ್ತಾರೆ, ನೀವೇ ನೋಡುತ್ತೀರಿ ಎಂದು ನಗುತ್ತಾ ಉತ್ತರಿಸಿದರು.

ಎಲ್ಲರೂ ಒಗ್ಗಟ್ಟಿನಿಂದ ಮುಂದೆ ಹೋಗುವ ಸಂಕಲ್ಪ ಮಾಡಿದ್ದೇವೆ. ಅದಕ್ಕೆ ಬೇಕಾದ ಎಲ್ಲಾ ಕಾರ್ಯಕ್ರಮಗಳನ್ನು ರೂಪಿಸುತ್ತಿದ್ದೇವೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಸಂಪಾದಕೀಯ

## ರಾಜಕೀಯದಲ್ಲಿ ಯಾರು ಮಿತ್ರರು ಅಲ್ಲ, ಶತ್ರುಗಳು ಅಲ್ಲ

ರಾಜಕೀಯದಲ್ಲಿ ಯಾರು ಮಿತ್ರರು ಅಲ್ಲ ಶತ್ರುಗಳು ಅಲ್ಲ ಎನ್ನುವ ಮಾತು ಜನಜನಿತವಾಗಿದೆ. ಕಳೆದ ಮೂರು ದಶಕದಿಂದ ಕರ್ನಾಟಕದ ರಾಜಕಾರಣವನ್ನ ಗಮನಿಸಿದಲ್ಲಿ ಈ ಮಾತು ಅಕ್ಷರ ನಿಜವಾಗಿದೆ. ಅಧಿಕಾರಕ್ಕಾಗಿ ಪಕ್ಷ, ತತ್ವ, ಸಿದ್ಧಾಂತವನ್ನೇ ಬಿಟ್ಟು ಮಿತ್ರರನ್ನ ಬಿಟ್ಟು ಮುನ್ನಡೆದವರ ಸಂಖ್ಯೆ ದೊಡ್ಡದಿದೆ.

ಅದೇ ರೀತಿ ಕ್ಷುಲ್ಲಕ ಕಾರಣಕ್ಕಾಗಿ ವೈರತ್ವವನ್ನು ಕಟ್ಟಿಕೊಂಡದ್ದು ಇದೆ. ಇದು ಕೇವಲ ಯಾವುದೇ ಒಂದು ಪಕ್ಷಕ್ಕೆ ಸೀಮಿತ ಅಲ್ಲ. ಎಲ್ಲ ಪಕ್ಷಗಳಲ್ಲೂ ಇಂತಹ ರಾಜಕಾರಣಿಗಳು ಇದ್ದೆ ಇರುತ್ತಾರೆ. ಆದರೆ ಇದಕ್ಕೆ ವ್ಯತಿರಿಕ್ತ ಎನ್ನುವಂತಿದ್ದ ಬಳ್ಳಾರಿಯ ಜನಾರ್ದನ ರೆಡ್ಡಿ ಮತ್ತು ಶ್ರೀರಾಮುಲು ಮಧ್ಯೆ ಈಗ ವೈರತ್ವ ಮೂಡಿದೆ.

ರಾಜ್ಯ ರಾಜಕಾರಣದಲ್ಲಿ ವರ್ಣರಂಜಿತ ರಾಜಕಾರಣಿಗಳಾಗಿದ್ದ ಈ ಇಬ್ಬರು, ಒಂದು ಕಾಲದಲ್ಲಿ ಬಿಜೆಪಿಯನ್ನು ಅಧಿಕಾರಕ್ಕೆ ತರುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ಗಣಿ ರಾಜಕಾರಣ ಎಂದರೆ ಅದು ರಾಷ್ಟ್ರಮಟ್ಟದಲ್ಲಿ ಸದ್ದು ಮಾಡುವಂತಿತ್ತು. ಬಿಜೆಪಿಯ ಹಿರಿಯ ನಾಯಕಿ ಸುಷ್ಮಾ ಸ್ವರಾಜ್ ಆಶೀರ್ವಾದ ಬಲ ಹೊಂದಿದ್ದ ಈ ಇಬ್ಬರು ನಾಯಕರು, ಸಂಡೂರು ಕ್ಷೇತ್ರದ ಸೋಲಿನ ವಿಚಾರವಾಗಿ ಪರಸ್ಪರ ವಾಗ್ದಾಳಿ ನಡೆಸುವ ಮಟ್ಟಕ್ಕೆ ಪರಿಸ್ಥಿತಿ ತಿರುಗಿದೆ.

ಬಿಜೆಪಿ ಬಣ ರಾಜಕಾರಣಕ್ಕೆ ಬಳಲಿ ಬೆಂಡಾಗುತ್ತಿರುವ ಕಾಲದಲ್ಲಿ, ಬಳ್ಳಾರಿಯ ಈ ಇಬ್ಬರು ನಾಯಕರು ಆರಂಭಿಸಿರುವ ವಾಗ್ದಾಳಿ ಕಮಲ ಪಾಳ್ಯದಲ್ಲಿ ಭಾರಿ ಬಿರುಕು ಸೃಷ್ಟಿಗೆ ಕಾರಣವಾಗಿದೆ. ಪಕ್ಷ, ಸಂಘಟನೆ ಬಿಟ್ಟು ಈ ಇಬ್ಬರು ನಾಯಕರು ವೈಯಕ್ತಿಕ ಆರೋಪ ಪ್ರತ್ಯಾರೋಪದಲ್ಲಿ ತೊಡಗಿರುವುದು ಬಿಜೆಪಿ ರಾಷ್ಟ್ರೀಯ ನಾಯಕರಿಗೂ ಇರಿಸುಮುರಿಸು ತಂದೊಡ್ಡಿದೆ.

ಶ್ರೀರಾಮುಲು ಮತ್ತು ಜನಾರ್ದನ ರೆಡ್ಡಿ ನಡುವಿನ ವಾಕ್ ಸಮರ ಒಂದೆಡೆಯಾದರೆ, ಬಿಜೆಪಿ ರಾಜ್ಯಾಧ್ಯಕ್ಷರ ಆಯ್ಕೆಯ ವಿಷಯವಾಗಿ ಯತ್ನಾಳ್ ಮತ್ತು ವಿಜಯೇಂದ್ರ ಬಣದ ಮಧ್ಯೆ ವಾಗ್ದಾಳಿ ಮತ್ತಷ್ಟು ಜೋರಾಗಿದೆ. ಪ್ರಬಲ ಪ್ರತಿಪಕ್ಷವಾಗಿ ಕೆಲಸ ಮಾಡಬೇಕಿದ್ದ ಬಿಜೆಪಿ ತನ್ನ ಆಂತರಿಕ ಕಚ್ಚಾಟದಿಂದ ಹೊರಬರಲು ಸಾಧ್ಯವಾಗದೇ ನರಳಾಡುತ್ತಿರುವುದು ವಿಪರ್ಯಾಸ.

### ಜನವರಿ 24, 'ರಾಷ್ಟ್ರೀಯ ಹೆಣ್ಣು ಮಕ್ಕಳ ದಿನ' ಆಚರಣೆಯ ನಿಮಿತ್ತ ವಿಶೇಷ ಲೇಖನ

# 'ಹೆಣ್ಣು' ನಂದಾದೀಪ: ಬೆಳಗಲು ಬಿಡಿ

ಹೆಣ್ಣೊಬ್ಬಳು ತಾನು ಕಲಿತರೆ ತನ್ನ ಸುತ್ತಮುತ್ತಲಿನ ಜನರನ್ನು ಸುಶಿಕ್ಷಿತರನ್ನಾಗಿಸುತ್ತಾಳೆ. ಸನ್ಮಾರ್ಗದಲ್ಲಿ ನಡೆಸುತ್ತಾಳೆ. ಪ್ರತಿಯೊಬ್ಬರ ಜೀವನವು ರೂಪುಗೊಳ್ಳಲು ಹೆಣ್ಣುಮಕ್ಕಳ ಪಾತ್ರ ಅಗಾಧವಾಗಿದೆ. ನನ್ನ ಜೀವನದಲ್ಲೂ ಅಮ್ಮ, ದೊಡ್ಡಮ್ಮ, ಅತ್ತೆ, ಅಕ್ಕ-ತಂಗಿ, ಅತ್ತಿಗೆ ಹೀಗೆ ಎಲ್ಲರೂ ಒಂದಿಲ್ಲೊಂದು ಬದಲಾವಣೆಗೆ ಕಾರಣರಾಗಿದ್ದಾರೆ.

ಭಾರತದಲ್ಲಿ ಪ್ರತಿ ವರ್ಷ ಜನವರಿ 24ರಂದು 'ರಾಷ್ಟ್ರೀಯ ಹೆಣ್ಣು ಮಕ್ಕಳ ದಿನ'ವನ್ನು ಆಚರಿಸಲಾಗುತ್ತದೆ. ಇದನ್ನು 2008ರಲ್ಲಿ ಭಾರತ ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯ ಭಾರತೀಯ ಸಮಾಜದ ಜನರಲ್ಲಿ ತಮ್ಮ ಜೀವನವನ್ನು ಉತ್ತಮಗೊಳಿಸಲು ಸಮಾಜದಲ್ಲಿ ಹೆಣ್ಣು ಮಕ್ಕಳ ಸ್ಥಾನವನ್ನು ಉತ್ತೇಜಿಸಲು ಮತ್ತು ಅವರು ಎದುರಿಸುತ್ತಿರುವ ಅಸಮಾನತೆಗಳ ಬಗ್ಗೆ ಸಾರ್ವಜನಿಕ ಜಾಗೃತಿ ಮೂಡಿಸಲು ಈ ದಿನಕ್ಕೆ ಮಹತ್ವವನ್ನು ಸಾರಲು ಪ್ರಾರಂಭಿಸಿತು. ಹೆಣ್ಣು ಮಗುವನ್ನು ಉಳಿಸಿ, ಹೆಣ್ಣು ಮಕ್ಕಳಿಗೆ ಆರೋಗ್ಯಕರ ಮತ್ತು ಸುರಕ್ಷಿತ ವಾತಾವರಣವನ್ನು ನಿರ್ಮಿಸುವ ಬಗ್ಗೆ ಜಾಗೃತಿ ಅಭಿಯಾನಗಳನ್ನು ಒಳಗೊಂಡಂತೆ ಸಂಘಟಿತ ಕಾರ್ಯಕ್ರಮಗಳೊಂದಿಗೆ ಈ ದಿನವನ್ನು ಆಚರಿಸಲಾಗುತ್ತದೆ.

ರಾಷ್ಟ್ರೀಯ ಹೆಣ್ಣು ಮಕ್ಕಳ ದಿನವನ್ನು ಆಚರಿಸುವ ಹಿಂದಿನ ಉದ್ದೇಶವು ದೇಶದ ಹೆಣ್ಣುಮಕ್ಕಳಿಗೆ ಎಲ್ಲಾ ಬೆಂಬಲ ಮತ್ತು ಅವಕಾಶಗಳನ್ನು ಒದಗಿಸುವುದು. ಹೆಣ್ಣು ಮಕ್ಕಳ ಹಕ್ಕುಗಳ ಬಗ್ಗೆ ಜಾಗೃತಿಯನ್ನು ಉತ್ತೇಜಿಸುವುದು ಮತ್ತು ಹೆಣ್ಣುಮಕ್ಕಳ ಶಿಕ್ಷಣದ ಪ್ರಾಮುಖ್ಯತೆ ಅವರ ಆರೋಗ್ಯ ಮತ್ತು ಪೋಷಣೆಯ ಬಗ್ಗೆ ಜಾಗೃತಿಯನ್ನು ಹೆಚ್ಚಿಸುವುದು. ದೇಶದಲ್ಲಿ ಹೆಣ್ಣು ಮಕ್ಕಳು ಎದುರಿಸುತ್ತಿರುವ ಅಸಮಾನತೆಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವುದು, ಸ್ತ್ರೀ ಶಿಕ್ಷಣ, ಆರೋಗ್ಯ ಮತ್ತು ಪೋಷಣೆಯ ಪ್ರಾಮುಖ್ಯತೆಯ ಕುರಿತು ಅರಿವು ಹೆಚ್ಚಿಸುವುದಾಗಿದೆ.




ಇದಕ್ಕೆಲ್ಲ ಕಾರಣ ಇಂದಿರಾ ಗಾಂಧಿ. ಅವರು 1966ರಲ್ಲಿ ದೇಶದ ಮೊದಲ ಮಹಿಳಾ ಪ್ರಧಾನ ಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ ದಿನ. ಜನವರಿ 24, ಭಾರತದ ಇತಿಹಾಸದಲ್ಲಿ ಮತ್ತು ಮಹಿಳಾ ಸಬಲೀಕರಣದಲ್ಲಿ ಮಹತ್ವದ ದಿನವಾಗಿದೆ. ವಿಶ್ವ ಸಂಸ್ಥೆಯ ಅಂಕಿ-ಅಂಶಗಳ ಪ್ರಕಾರ, ಅಭಿವೃದ್ಧಿ ಹೊಂದುತ್ತಿರುವ ದೇಶಗಳಲ್ಲಿ, ಬೆರಳೆಣಿಕೆಯಷ್ಟು ದೇಶಗಳನ್ನು ಹೊರತುಪಡಿಸಿ, ಮೂರು ಹುಡುಗಿಯರಲ್ಲಿ ಒಬ್ಬರು 18 ವರ್ಷಕ್ಕಿಂತ ಮೊದಲೇ ಮದುವೆಯಾಗುತ್ತಾರೆ. ಒಂಬತ್ತು ಹುಡುಗಿಯರಲ್ಲಿ ಒಬ್ಬರು ತಮ್ಮ 15ನೇ ವರ್ಷ ತುಂಬುವ ಮೊದಲೇ ಮದುವೆಯಾಗುತ್ತಾರೆ. ಈ ಹೆಣ್ಣು ಮಕ್ಕಳಲ್ಲಿ ಹೆಚ್ಚಿನವರು ಬಡವರು, ಕಡಿಮೆ ವಿದ್ಯಾವಂತರು ಮತ್ತು ಗ್ರಾಮೀಣ ಪ್ರದೇಶದಲ್ಲಿ ವಾಸಿಸುತ್ತಿದ್ದಾರೆ ಎಂಬುದು ಗಮನಾರ್ಹವಾಗಿದೆ.

ಸಮಾಜದಲ್ಲಿ ನಿತ್ಯ ಹೆಣ್ಣು ಮಕ್ಕಳ ಮೇಲಿನ ದೌರ್ಜನ್ಯಗಳು, ಅತ್ಯಾಚಾರಗಳು ಹೆಚ್ಚಾಗುತ್ತಲೇ ಇವೆ. ಇವುಗಳಿಂದ ಅದೆಷ್ಟೋ ಜನ ಜೀವ ಮತ್ತು ಜೀವನ ಎರಡನ್ನೂ ಕಳೆದುಕೊಳ್ಳುತ್ತಿರುವುದು ಆತಂಕಕಾರಿ ವಿಚಾರವಾಗಿದೆ. ಹಲವಾರು ರಾಜಕೀಯ ನಾಯಕರು ಮತ್ತು ಸಮುದಾಯದ ನಾಯಕರು ಹೆಣ್ಣು ಮಕ್ಕಳ ಶಿಕ್ಷಣ ಮತ್ತು ಸಂವಿಧಾನಿಕ ಹಕ್ಕುಗಳ ಬಗ್ಗೆ ಜನರಿಗೆ ತೋರಿಕೆಗೆ ಮಾತ್ರ ತಮ್ಮ ಭಾಷಣದಲ್ಲಿ ಮಾತನಾಡುತ್ತಿರುವುದು ವಿಷಾದನೀಯ.

### ಸುಧಾರಣೆ ಹೇಗೆ?

* 14 ವರ್ಷದವರೆಗಿನ ಹೆಣ್ಣು ಹಾಗೂ ಗಂಡು ಮಕ್ಕಳಿಗೆ ಕಡ್ಡಾಯ ಮತ್ತು ಉಚಿತ ಶಿಕ್ಷಣ ನೀಡಬೇಕು.
* ದೇಶಗಳಲ್ಲಿ ಬಾಲ್ಯವಿವಾಹ ತಡೆಗುಟ್ಟುವುದು.
* ಸಮಾಜದಲ್ಲಿ ಹೆಣ್ಣು-ಗಂಡು ಎಂಬ ಭೇದ-ಭಾವ ತೊರೆದು ಸಹಬಾಳ್ವೆ, ಸಮಾನ ಜೀವನ ರೂಪಿಸಬೇಕಿದೆ.
* ಸಮಾಜದ ಜನರಲ್ಲಿ ತಮ್ಮ ಜೀವನವನ್ನು ಉತ್ತಮಗೊಳಿಸಲು ಸಮಾಜದಲ್ಲಿ ಹುಡುಗಿಯರ ಸ್ಥಾನವನ್ನು ಉತ್ತೇಜಿಸಲು ಮತ್ತು ಹುಡುಗಿಯರು ಎದುರಿಸುತ್ತಿರುವ ಅಸಮಾನತೆಗಳ ಬಗ್ಗೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸಬೇಕಿದೆ.
* ಹೆಣ್ಣು ಮಗುವನ್ನು ಉಳಿಸಿ, ಮಕ್ಕಳ ಲಿಂಗ ಅನುಪಾತ ಮತ್ತು ಹೆಣ್ಣುಮಕ್ಕಳಿಗೆ ಆರೋಗ್ಯಕರ, ಸುರಕ್ಷಿತ ವಾತಾವರಣವನ್ನು ನಿರ್ಮಿಸುವ ಬಗ್ಗೆ ಜಾಗೃತಿ ಅಭಿಯಾನಗಳನ್ನು ಒಳಗೊಂಡಂತೆ ಸಂಘಟಿತ ಕಾರ್ಯಕ್ರಮಗಳನ್ನು ಆಯೋಜಿಸುವುದು.
* ಹೆಣ್ಣು ಮಕ್ಕಳ ವಿರುದ್ಧ ನಡೆಯುವ ಶೋಷಣೆ, ಹೆಣ್ಣು ಭ್ರೂಣ ಹತ್ಯೆ, ಲೈಂಗಿಕ ಕಿರುಕುಳದಂತಹ ಹೇಯ ಕೃತ್ಯಗಳನ್ನು ತಡೆಗಟ್ಟಲು, ಹೆಣ್ಣು ಮಕ್ಕಳ ಹಕ್ಕಿನ ಬಗ್ಗೆ ಜಾಗೃತಿ ಮೂಡಿಸಬೇಕಿದೆ.

ಶಾಲೆಗಳಲ್ಲಿ ಸಮಗ್ರ ಶಿಕ್ಷಾ ಅಡಿಯಲ್ಲಿ ಹೆಣ್ಣುಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವ ಸಲುವಾಗಿ ಈ ಕೆಳಗಿನ ಉಪಕ್ರಮಗಳು ಸಹಕಾರಿಯಾಗುತ್ತವೆ.

* ರಾಜ್ಯವು ವ್ಯಾಖ್ಯಾನಿಸಿದಂತೆ ನೆರೆ-ಹೊರೆಯಲ್ಲಿ ಶಾಲೆಗಳನ್ನು ತೆರೆಯುವುದು.
* 8ನೇ ತರಗತಿವರೆಗಿನ ಎಲ್ಲಾ ಹುಡುಗಿಯರಿಗೆ ಉಚಿತ ಪುಸ್ತಕ, ಸಮವಸ್ತ್ರ ವಿತರಣೆ, ಎಸ್ಸಿ, ಎಸ್ಟಿ ಮಕ್ಕಳು ಮತ್ತು ಬಡತನ ರೇಖೆಗಿಂತ ಕೆಳಗಿರುವ (ಬಿಪಿಎಲ್) ಮಕ್ಕಳಿಗೂ ವಿಸ್ತರಣೆ.
* ಎಲ್ಲಾ ಶಾಲೆಗಳಲ್ಲಿ ಲಿಂಗ ಪ್ರತ್ಯೇಕ ಶೌಚಾಲಯಗಳನ್ನು ಒದಗಿಸುವುದು.
* 6ರಿಂದ 12ನೇ ತರಗತಿಗಳ ಹುಡುಗಿಯರಿಗೆ ಆತ್ಮರಕ್ಷಣೆಯ ತರಬೇತಿಗೆ ಅವಕಾಶ.
* ವಿಶೇಷಚೇತನ ಹುಡುಗಿಯರಿಗೆ 1ರಿಂದ ತರಗತಿ 12ನೇ ತರಗತಿವರೆಗೆ ಸ್ಟೈಫಂಡ್ ನೀಡುವುದು.
* ದೂರದ/ಗುಡ್ಡಗಾಡು ಪ್ರದೇಶಗಳಲ್ಲಿ/ಕಠಿಣ ಪ್ರದೇಶವಿರುವ ಪ್ರದೇಶಗಳಲ್ಲಿ ಶಿಕ್ಷಕರಿಗೆ ಮತ್ತು ಮಕ್ಕಳಿಗೆ ವಸತಿ ಶಿಕ್ಷಣ ಸಮುಚ್ಚಯ ನಿರ್ಮಾಣ.

ಒಟ್ಟಾರೆಯಾಗಿ ನಾವು ನಮ್ಮ ಹೆಣ್ಣುಮಕ್ಕಳ ಬಗ್ಗೆ ಹೆಮ್ಮೆ ಪಡೋಣ ಹಾಗೂ ಹೆಣ್ಣು ಮಗುವಿನ ಮಹತ್ವದ ಬಗ್ಗೆ ಜಾಗೃತಿ ಮೂಡಿಸೋಣ. 'ಹೆಣ್ಣೊಂದು ಕಲಿತರೆ, ಶಾಲೆಯೊಂದು ತೆರೆದಂತೆ' ಎಂಬ ಹಿರಿಯರ ಮಾತೂ ಸತ್ಯ. ಹೀಗಾಗಿ ಹೆಣ್ಣು ಕುಟುಂಬದ ಕಣ್ಣು ಹಾಗೂ ಜಗದ ಬಾಳಿನ ಕಣ್ಣು. ಸ್ತ್ರೀ ಎಂದರೆ ತಾನು ಉರಿದು ಜಗವನೆಲ್ಲ ಬೆಳಗುವ ಬತ್ತಿಯಂತೆ. ತಾನು ಸ್ವಾರ್ಥಕ್ಕಾಗಿ ಹಂಬಲಿಸದೆ ಕುಟುಂಬದ ಹಿತಕ್ಕಾಗಿ ತನ್ನ ಬದುಕನ್ನು ಮುಡಿಪಾಗಿಡುವವಳು ಹೆಣ್ಣು.



**- ಬಸವರಾಜ ಎಮ್.ಯರಗುಪ್ಪಿ.**
**ಬಿಆರ್‌ಪಿ, ಶಿರಹಟ್ಟಿ- ಲಕ್ಷ್ಮೇಶ್ವರ.**

## ಜಾನೋಪಂತರ ಕ್ರಿಕೆಟ್ ಅಕಾಡೆಮಿಗೆ ಪ್ರಶಸ್ತಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಇತ್ತೀಚೆಗೆ ಹುಬ್ಬಳ್ಳಿಯ ಬಿ.ಜಿ ಮೈದಾನದಲ್ಲಿ ಆಹ್ವಾನಿತ ತಂಡಗಳಿಗಾಗಿ ನಡೆದ 16 ವರ್ಷದೊಳಗಿನ ಕ್ರಿಕೆಟ್ ಟೂರ್ನಿಯಲ್ಲಿ ಗದುಗಿನ ಜಾನೋಪಂತರ ಕ್ರಿಕೆಟ್ ಅಕಾಡೆಮಿ ತಂಡವು ಪ್ರಶಸ್ತಿಯನ್ನು ಗೆದ್ದುಕೊಂಡಿದೆ.

ಈ ಟೂರ್ನಿಯನ್ನು ಹುಬ್ಬಳ್ಳಿಯ ಶ್ರೀ ಸಿದ್ಧಾರೂಢಸ್ವಾಮಿ ಸ್ಪೋರ್ಟ್ಸ್ ಕ್ಲಬ್ ಆಯೋಜಿಸಿತ್ತು. ಹುಬ್ಬಳ್ಳಿ-ಧಾರವಾಡ, ಗದಗ, ಅಂಕಲಿ, ಹಾವೇರಿ ಹಾಗೂ ರಾಣೇಬೆನ್ನೂರಿನ ಒಟ್ಟು 8 ತಂಡಗಳು ಈ ಟೂರ್ನಿಯಲ್ಲಿ ಭಾಗವಹಿಸಿದ್ದವು. ಅಂತಿಮ ಪಂದ್ಯದಲ್ಲಿ ಗದಗ ಜಾನೋಪಂತರ ಕ್ರಿಕೆಟ್ ಅಕಾಡೆಮಿ ತಂಡವು ಹುಬ್ಬಳ್ಳಿಯ ಕೆ.ಎಲ್.ಇ. ಹೈಸ್ಕೂಲಿನ ತಂಡವನ್ನು ಸೋಲಿಸಿ ಪ್ರಶಸ್ತಿಯನ್ನು ಗೆದ್ದುಕೊಂಡಿತು.



## ಸುಂದರ ಬರವಣಿಗೆ ಹೃದಯದ ಭಾಷೆಯ ಅಭಿವ್ಯಕ್ತಿ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸುಂದರ ಬರವಣಿಗೆಯು ಹೃದಯದ ಭಾಷೆಯ ಅಭಿವ್ಯಕ್ತಿಯಾಗಿದ್ದು, ನೀವು ನಿಮ್ಮ ಕೈಬರಹವನ್ನು ಸುಂದರಗೊಳಿಸಿಕೊಳ್ಳಿ. ಇದರಿಂದ ನಿಮ್ಮ ವ್ಯಕ್ತಿತ್ವಕ್ಕೊಂದು ಮೆರಗು ಬರುತ್ತದೆ ಎಂದು ಶ್ರೀ ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿಯ ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ ಹೇಳಿದರು.

ಸಮೀಪದ ನಿಡಗುಂದಿಯ ಶ್ರೀ ಅನ್ನದಾನೇಶ್ವರ ಪ್ರೌಢಶಾಲೆಯಲ್ಲಿ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳ ಕೈಬರಹದ ಪರಿಶೀಲನೆ ಕೈಗೊಂಡು ನಂತರ ಅವರು ಮಾತನಾಡಿದರು.



ಓದುವ ಭಾಷೆ ಶುದ್ಧವಾಗಿರಬೇಕು, ಸ್ಫುಟವಾಗಿರಬೇಕು. ಹಾಗೆಯೇ ಬರೆಯುವದೂ ಕೂಡ ಶುದ್ಧವಾಗಿ, ಸ್ಪಷ್ಟವಾಗಿ, ತಪ್ಪಿಲ್ಲದಂತೆ, ಅಂದವಾಗಿ ಬರೆಯುವುದನ್ನು ನೀವು ರೂಢಿಸಿಕೊಂಡರೆ ಭವಿಷ್ಯದಲ್ಲಿ ಉತ್ತಮ ವ್ಯಕ್ತಿಗಳಾಗುತ್ತೀರಿ ಎಂದರು.

ನಿಮ್ಮ ಬರವಣಿಗೆಯೇ ನಿಮಗೆ ಮುಂಬರುವ ಪರೀಕ್ಷೆಯಲ್ಲಿ ಅಂಕಗಳನ್ನು ತಂದು ಕೊಡುತ್ತದೆ.

ನಿಮ್ಮ ಉತ್ತರ ಪತ್ರಿಕೆಯನ್ನು ನೋಡಿದ ತಕ್ಷಣ ಹೌದೆನ್ನುವಂತೆ ಇರಬೇಕು.

ಆ ರೀತಿಯ ಬರವಣಿಗೆ ನಿಮ್ಮದಾಗಬೇಕು. ನಿಮ್ಮ ಮನಸ್ಸು ಎಂದಿಗೂ ಚಂಚಲವಾಗಬಾರದು. ಏಕನಿಷ್ಠೆಯಿಂದ ಅಭ್ಯಾಸದ ಕಡೆಗೆ ಗಮನ ನೀಡಬೇಕು. ಇನ್ನೆರಡು ತಿಂಗಳು ಇಷ್ಟಪಟ್ಟು ಓದಿ ನಿಮ್ಮ ಜೀವನಕ್ಕೆ ಭದ್ರ ಬುನಾದಿಯನ್ನು ಹಾಕಿಕೊಳ್ಳಬೇಕೆಂದು ದೊಡ್ಡಮೇಟಿ ಹೇಳಿದರು. ಗುರುಮೂರ್ತಿಸ್ವಾಮಿ ಮಂಟಯ್ಯನವರು ಮಕ್ಕಳು ಪರೀಕ್ಷೆಯಲ್ಲಿ ಕೌಶಲ್ಯಪೂರ್ವಕವಾಗಿ ಹೇಗೆ ಉತ್ತರಿಸಬೇಕು, ಅದರಿಂದ ಹೆಚ್ಚಿನ ಅಂಕಗಳನ್ನು ಹೇಗೆ ಪಡೆಯುಬೇಕೆಂಬುದನ್ನು ವಿದ್ಯಾರ್ಥಿಗಳಿಗೆ ತಿಳಿಸಿಕೊಟ್ಟರು.

ಈ ಸಂದರ್ಭದಲ್ಲಿ ಮುಖ್ಯ ಶಿಕ್ಷಕ ಎಸ್.ಐ. ದಿಂಡೂರ, ಶಿಕ್ಷಕರಾದ ವೆಂಕನಗೌಡರ, ಎಂ.ಬಿ. ಕೊಪ್ಪದ, ಎಸ್.ವಿ. ಹಳ್ಳಿಕೇರಿ, ಎಚ್.ಬಿ. ಕಟ್ಟಿಮನಿ, ಶಿಕ್ಷಕಿ ಎಸ್.ಬಿ. ಹಿರೇಮಠ, ಬಿ.ಪಿ. ಕಾಗಿ, ವೀರಣ್ಣ ಅರಮನಿ ಉಪಸ್ಥಿತರಿದ್ದರು.

## ಹಳೆಯ ಆರೋಪಿಗಳ ಪರೇಡ್

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಸನ್ನದೇತರ ಪ್ರದೇಶಗಳಲ್ಲಿ ಅಕ್ರಮ ಮದ್ಯ ಮಾರಾಟ, ನೀರು ಮಿಶ್ರಿತ ಮದ್ಯಸಾರ ಮಾರಾಟ, ಹೊರ ರಾಜ್ಯದ ಮದ್ಯ ಮಾರಾಟ, ಕಳ್ಳಭಟ್ಟಿ ಹಾಗೂ ನಕಲಿ ಮದ್ಯ ಮಾರಾಟ ಹಾಗೂ ಯಾವುದೇ ರೀತಿಯ ಮಾದಕ ವಸ್ತುಗಳ ಮಾರಾಟದಂತಹ ಪ್ರಕರಣಗಳಲ್ಲಿ ಭಾಗಿಯಾಗಿ ಅಬಕಾರಿ ಅಪರಾಧಗಳಲ್ಲಿ ತೊಡಗಿದ್ದ ಹಳೆಯ ಆರೋಪಿಗಳ ಚಲನ-ವಲನಗಳ ಮೇಲೆ ತೀವ್ರ ನಿಗಾ ವಹಿಸುವ ನಿಟ್ಟಿನಲ್ಲಿ ಮತ್ತು ಅಕ್ರಮ ಮದ್ಯ ಮಾರಾಟವನ್ನು ಸಂಪೂರ್ಣವಾಗಿ ತಡೆಗಟ್ಟುವ ನಿಟ್ಟಿನಲ್ಲಿ ಜಿಲ್ಲೆಯಾದ್ಯಂತ ಇರುವ ಹಳೆಯ 150 ಆರೋಪಿಗಳ ಪರೇಡ್‌ನ್ನು ಬುಧವಾರ ಬೆಳಿಗ್ಗೆ ನವನಗರದ ಅಬಕಾರಿ ಉಪ ಆಯುಕ್ತರ ಕಚೇರಿ ಆವರಣದಲ್ಲಿ ನಡೆಸಿದರು.



ಸದರಿ ಆರೋಪಿಗಳು ಪ್ರಸ್ತುತ ನಿರ್ವಹಿಸುತ್ತಿರುವ ಕೆಲಸ ಕಾರ್ಯಗಳ ಕುರಿತು ಹಾಗೂ ಈ ಹಿಂದಿನ ಕೆಲಸವನ್ನು ತೊರೆದಿರುವ ಕುರಿತು ವಿಚಾರಣೆ ನಡೆಸಿ, ಮುಂದಿನ ದಿನಗಳಲ್ಲಿ ಯಾವುದೇ ರೀತಿಯ ಅಕ್ರಮ ಮದ್ಯ ಮಾರಾಟ ಮಾಡದಂತೆ ಅಬಕಾರಿ ಅಪರಾಧಗಳಲ್ಲಿ ತೊಡಗದಂತೆ ಕಟ್ಟುನಿಟ್ಟಿನ ಮುನ್ನೆಚ್ಚರಿಕೆಯನ್ನು ನೀಡಿದರು.

ಹಳೆಯ ಆರೋಪಿಗಳ ಪರೇಡ್ ಕಾರ್ಯಕ್ರಮ ಜಿಲ್ಲೆಯ ಅಬಕಾರಿ ಉಪ ಆಯುಕ್ತರಾದ ರಮೇಶ ಕುಮಾರ ಹೆಚ್ ನೇತೃತ್ವದಲ್ಲಿ ನಡೆಸಲಾಯಿತು. ಪರೇಡನಲ್ಲಿ ಜಿಲ್ಲೆಯ ಉಪ ವಿಭಾಗಗಳ ಅಬಕಾರಿ ಉಪ ಅಧೀಕ್ಷಕರು ಹಾಗೂ ನಿರೀಕ್ಷಕರುಗಳು ಭಾಗವಹಿಸಿದ್ದರು.

## ಹಳೆಯ ಪತ್ರಿಕೆಗಳ 8ನೇ ಪ್ರದರ್ಶನ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ತಾಲೂಕಿನ ಬೆಳಧಡಿಯ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಜ.26ರಂದು ಬೆಳಿಗ್ಗೆ 8 ಗಂಟೆಗೆ 76ನೇ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಗದುಗಿನ ಚಿತ್ರಕಲಾವಿದ ಶಂಕರಗೌಡ ಪಾಟೀಲ ಸಂಗ್ರಹಿಸಿರುವ, ನಾಡಿನ ವಿವಿಧ ಪತ್ರಿಕೆಗಳಲ್ಲಿ ಪ್ರಕಟಗೊಂಡ ಭಾರತ ಸ್ವಾತಂತ್ರ್ಯ ಹೋರಾಟದ ನೆನಪುಗಳ ಹಳೆಯ ಪತ್ರಿಕೆಗಳ 8ನೇ ಪ್ರದರ್ಶನ ಜರುಗಲಿದೆ.

ಕಾರ್ಯಕ್ರಮದ ಅಧ್ಯಕ್ಷತೆ ಮತ್ತು ಧ್ವಜಾರೋಹಣವನ್ನು ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಈರಣ್ಣ ಮ.ಕಲ್ಮಠ ವಹಿಸುವರು. ಪ್ರದರ್ಶನದ ಉದ್ಘಾಟನೆಯನ್ನು ಬೆಳಧಡಿ ಗ್ರಾ.ಪಂ ಅಧ್ಯಕ್ಷ ಶಂಕ್ರಪ್ಪ ಹೊಸಮನಿ ನೆರವೇರಿಸುವರು.



ಮುಖ್ಯ ಅತಿಥಿಗಳಾಗಿ ಲಕ್ಷ್ಮವ್ವ ಮುಂದಲಮನಿ, ಪಾರ್ವತಿ ಗುಡಿಮನಿ, ಶಾರದಾ ಇನಾಮತಿ, ಬಸವರಾಜ ಪೂಜಾರಿ, ಬಸವರಾಜ ಕುರ್ತಕೋಟಿ, ಚಂದ್ರಕಲಾ ಇಟಗಿಮಠ, ಶಂಭುಲಿಂಗಯ್ಯ ಕಲ್ಮಠ ಪಾಲ್ಗೊಳ್ಳುವರು.

ಮುಖ್ಯ ಶಿಕ್ಷಕರಾದ ಭೋಜರಾಜ ಹಡಪದ, ಸಂಜೀವಸ್ವಾಮಿ ಎಂ.ಬಿ. ಅಬ್ಬಿಗೇರಿ, ಶಾಲೆಯ ಶಿಕ್ಷಕ-ಶಿಕ್ಷಕಿಯರು, ಸಿಬ್ಬಂದಿ ವರ್ಗ ಹಾಗೂ ಎಸ್.ಡಿ.ಎಮ್.ಸಿ. ಸರ್ವ ಸದಸ್ಯರು ಪಾಲ್ಗೊಳ್ಳುವರು ಎಂದು ಪ್ರಕಟಣೆ ತಿಳಿಸಿದೆ.

## ಯೋಗಿ ವೇಮನರ ಜೀವನಾದರ್ಶ ಅಳವಡಿಸಿಕೊಳ್ಳಿ

**■ವಿಜಯಸಾಕ್ಷಿ ಸುದ್ದಿ, ಹುಲಕೋಟಿ**

ರಾಜಯೋಗಿ ವೇಮನರು ತಮ್ಮ ಆರಂಭಿಕ ಜೀವನದಲ್ಲಿ ಭೋಗಿಯಾಗಿ ಐಶಾರಾಮಿ ಜೀವನ ಕಳೆಯುತ್ತಾ ಮೋಹಪಾಶಕ್ಕೆ ಒಳಗಾಗಿದ್ದರು. ನಂತರ ಅತ್ತಿಗೆ ಹೇಮರಡ್ಡಿ ಮಲ್ಲಮ್ಮನ ಮಾತುಗಳಿಂದ ಪ್ರಭಾವಿತರಾಗಿ ಜೀವನದಲ್ಲಿ ಜಿಗುಪ್ಸೆ ಹೊಂದಿ ಯೋಗಿಯಾದರು. ಸಮಾಜದಲ್ಲಿ ಮೇಲು ಕೀಳೆಂಬ ಭಾವನೆ, ಜಾತಿ ಪದ್ಧತಿಯನ್ನು, ಮೂಢನಂಬಿಕೆಗಳನ್ನು , ಅಜ್ಞಾನವನ್ನು ಕೊನೆಗಾಣಿಸಲು ಪ್ರಯತ್ನಿಸಿದರು ಎಂದು ದೈಹಿಕ ಶಿಕ್ಷಣಶಾಸ್ತ್ರ ಶಿಕ್ಷಕಿ ಪಿ.ಕೆ. ಅವರಡ್ಡಿ ಅಭಿಪ್ರಾಯಪಟ್ಟರು.

ಅವರು ಸ್ಥಳೀಯ ಜಿ.ಸಿ.ಟಿ.ಎಂ. ಸ್ವತಂತ್ರ ಪದವಿಪೂರ್ವ ಕಾಲೇಜಿನಲ್ಲಿ ನಡೆದ ವೇಮನರ 613ನೇ ಜಯಂತಿ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದರು.



ಕಾಲೇಜಿನ ಶೈಕ್ಷಣಿಕ ಸಲಹಾ ಸಮಿತಿ ಚೇರಮನ್ ಡಿ.ಬಿ. ಓದುಗೌಡರ ಮಾತನಾಡಿ, ಕೇವಲ ಪಠ್ಯ ಶಿಕ್ಷಣವಲ್ಲದೇ ಜೀವನ ಶಿಕ್ಷಣವನ್ನು ಕಲಿಯಬೇಕು. ರಾಜಯೋಗಿ ವೇಮನರ ಸಂದೇಶಗಳು, ತತ್ವಗಳು ನಮಗೆ ಮಾರ್ಗದರ್ಶಕವಾಗಿವೆ. ನಾವು ಸಾತ್ವಿಕ ಬದುಕು ಹೊಂದಲು ದಾರ್ಶನಿಕರ ಪುಸ್ತಕ ಅಧ್ಯಯನ ಮಾಡಬೇಕೆಂಬ ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಹಿರಿಯ ಇತಿಹಾಸ ಉಪನ್ಯಾಸಕ ಕೆ.ಎಂ. ಗರಗ ವಹಿಸಿದ್ದರು. ಕೀರ್ತನಾ ಭದ್ರಾಪೂರ ಹಾಗೂ ಸಂಗಡಿಗರು ಪ್ರಾರ್ಥನೆಗೈದರು. ಅಂಕಿತಾ ಜಾಧವ ಸ್ವಾಗತಿಸಿದಳು. ನಂದಿನಿ ಅಕ್ಕಿ ಅತಿಥಿ ಅಧ್ಯಕ್ಷರನ್ನು ಪರಿಚಯಿಸಿದಳು. ಭಾಗ್ಯಶ್ರೀ ಕರಿಗಾರ ವೇಮನರ ಚರಿತ್ರೆ ಮತ್ತು ಸಾಹಿತ್ಯ ಕುರಿತು ಮಾತನಾಡಿದಳು. ಸಂಧ್ಯಾ ಮೇಗುಂಡಿ ಹಾಗೂ ವಿದ್ಯಾಶ್ರೀ ನಾಯ್ಕರ ಕಾರ್ಯಕ್ರಮ ನಿರೂಪಿಸಿದರು. ನಸರೀನ್ ಶೇಖಬಾಯಿ ವಂದಿಸಿದರು.

## ರಸ್ತೆ ಸುರಕ್ಷತಾ ಮಾಸಾಚರಣೆ



**■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ರಸ್ತೆ ಸುರಕ್ಷತಾ ಮಾಸಾಚರಣೆ ಅಂಗವಾಗಿ ಬುಧವಾರ ಆಟೋರಿಕ್ಷಾಗಳ ಮೇಲೆ 'ಪ್ರಯಾಣಿಕರ ಸುರಕ್ಷೆ ನಮ್ಮ ಆದ್ಯತೆ' ಎಂಬ ಘೋಷ ವಾಕ್ಯವುಳ್ಳ ಸ್ಟಿಕರ್‌ಗಳನ್ನು ಅಂಟಿಸಲಾಯಿತು.

ಬೆಳಗಾವಿ ವಿಭಾಗದ ಜಂಟಿ ಸಾರಿಗೆ ಆಯುಕ್ತರಾದ ಎಂ.ಪಿ. ಓಂಕಾರೇಶ್ವರಿ, ಆಟೋರಿಕ್ಷಾ ಮಾಲೀಕರು ಹಾಗೂ ಚಾಲಕರು ರಸ್ತೆ ಸುರಕ್ಷತೆಯ ಕುರಿತು ಕೈಗೊಳ್ಳಬೇಕಾದ ಕ್ರಮಗಳ ಕುರಿತು ಜಾಗೃತಿ ಅಂಶಗಳನ್ನು ವಿವರಿಸಿದರು.

ಈ ಸಂದರ್ಭದಲ್ಲಿ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಾದ ಕೆ. ದಾಮೋದರ, ಹಿರಿಯ ಮೋಟಾರು ವಾಹನ ನಿರೀಕ್ಷಕರಾದ ಎಸ್.ಡಿ. ಬೆಲ್ಲದ್, ಅಧೀಕ್ಷಕರಾದ ಕೆ.ಎಂ. ಗೀತಾ, ಪ್ರಥಮ ದರ್ಜೆ ಸಹಾಯಕರಾದ ವೀರಯ್ಯ ಕಂಬಿ ಉಪಸ್ಥಿತರಿದ್ದರು.

## ರಾಜ್ಯದ ಸ್ತಬ್ಧಚಿತ್ರಕ್ಕೆ ಪ್ರಶಸ್ತಿ ಲಭಿಸುವ ವಿಶ್ವಾಸ

▶▶ಮೊದಲನೇ ಪುಟದಿಂದ

ಕರ್ನಾಟಕದ ಗದಗ ಜಿಲ್ಲೆಯಲ್ಲಿರುವ ಲಕ್ಕುಂಡಿಯನ್ನು ಅದರ ಅದ್ಭುತ ಕಲ್ಲಿನ ವಾಸ್ತುಶಿಲ್ಪಕ್ಕಾಗಿ 'ಶಿಲ್ಪಕಲೆಯ ತೊಟ್ಟಿಲು' ಎಂದು ಕರೆಯಲಾಗುತ್ತದೆ. ಇಲ್ಲಿನ ಸುಂದರವಾದ ದೇವಾಲಯಗಳು, ಮೆಟ್ಟಿಲು ಬಾವಿಗಳು ಮತ್ತು ಚಾಲುಕ್ಯ ರಾಜವಂಶದ ಶಾಸನಗಳಿಗೆ ನೆಲೆಯಾಗಿದೆ. ಸಾಂಸ್ಕೃತಿಕ ಶಕ್ತಿ ಕೇಂದ್ರವಾಗಿರುವುದರ ಜೊತೆಗೆ, ಕ್ರಿ.ಶ 10ರಿಂದ 12ನೇ ಶತಮಾನದ ನಡುವೆ ಲಕ್ಕುಂಡಿ ಒಂದು ದೊಡ್ಡ ವಾಣಿಜ್ಯ ಕೇಂದ್ರವಾಗಿತ್ತು. ಈ ನಗರವು ಹಲವಾರು ರಾಜವಂಶಗಳಿಂದ ಆಳಲ್ಪಟ್ಟಿತ್ತಾದರೂ ಅವುಗಳಲ್ಲಿ ಅತ್ಯಂತ ಪ್ರಮುಖವಾದದ್ದು ಚಾಲುಕ್ಯರ ರಾಜವಂಶ.

ಲಕ್ಕುಂಡಿಯು ಪ್ರಾಚೀನಾನ್ವೇಷಕರು ಮತ್ತು ವಾಸ್ತುಶಿಲ್ಪ ಪ್ರಿಯರ ಸ್ವರ್ಗವಾಗಿದೆ. ಇದು 50 ದೇವಾಲಯಗಳನ್ನು ಹೊಂದಿದ್ದು, ಅವುಗಳಲ್ಲಿ ಹೆಚ್ಚಿನವು ಶಿವನಿಗೆ ಸಮರ್ಪಿತವಾಗಿವೆ. 101 ಮೆಟ್ಟಿಲು ಬಾವಿಗಳು (ಕಲ್ಯಾಣಿ/ಪುಷ್ಕರಣಿ); ಮತ್ತು 29 ಶಾಸನಗಳು ಇಲ್ಲಿವೆ. ಇವುಗಳು ಕಲ್ಯಾಣಿ ಚಾಲುಕ್ಯರ ಕಲೆ, ಸಂಸ್ಕೃತಿ ಮತ್ತು ವಾಸ್ತುಶಿಲ್ಪದ ಶ್ರೇಷ್ಠತೆಯ ಸಂಕೇತವಾಗಿದೆ. ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ ನಿರ್ವಹಿಸುತ್ತಿರುವ ವಸ್ತುಸಂಗ್ರಹಾಲಯವು ಲಕ್ಕುಂಡಿಯ ಶ್ರೀಮಂತ ಶಿಲ್ಪಕಲೆಯನ್ನು ಪ್ರದರ್ಶಿಸುತ್ತಿದೆ.

## ಜ.25ರಂದು ರಾಷ್ಟ್ರೀಯ ಮತದಾರರ ದಿನಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ರಾಷ್ಟ್ರೀಯ ಮತದಾರರ ದಿನಾಚರಣೆಯ ಜಿಲ್ಲಾ ಮಟ್ಟದ ಕಾರ್ಯಕ್ರಮವನ್ನು ಜನವರಿ 25 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಜರುಗಿಸಲಾಗುವುದು. ಎಲ್ಲ ಅಧಿಕಾರಿ / ಸಿಬ್ಬಂದಿಗಳು ಕಾರ್ಯಕ್ರಮಕ್ಕೆ ಹಾಜರಾಗಬೇಕು ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಸಿ.ಎನ್.ಶ್ರೀಧರ್ ಅವರು ತಿಳಿಸಿದ್ದಾರೆ.

### ಲಿಂಗಾಯತ ಪ್ರಗತಿಶೀಲ ಸಂಘದ ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಶ್ರೀಗಳು

# ಸಾಮರಸ್ಯದಿಂದ ಬದುಕಿದಾಗ ಬಾಳು ಬೆಳಕಾಗುತ್ತದೆ

■ವಿಜಯಸಾಕ್ಷಿ ಸುದ್ದಿ, ಗದಗ

ವೈಶಿಷ್ಟ್ಯಪೂರ್ಣ, ವಿನೂತನ ಆಲೋಚನೆಗಳಿಂದ ತುಂಬಿದ ಮಹಾಯೋಗಿ ವೇಮನರು ಶ್ರೇಷ್ಠ ದಾರ್ಶನಿಕರಲ್ಲಿ ಒಬ್ಬರು. ಯೋಗಿ ವೇಮನರ ಪದ್ಯಗಳಲ್ಲಿ ಆದರ್ಶ ಸಮಾಜ ನಿರ್ಮಾಣದ ಪರಿಕಲ್ಪನೆ ಇದೆ ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2729ನೇ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ನಡೆದುದೆಲ್ಲವನ್ನು ನೇರವಾಗಿ ಪದ್ಯಗಳ ಮೂಲಕ ಹೇಳುವ ಸ್ವಭಾವ ಯೋಗಿ ವೇಮನರದ್ದು. ಪ್ರತಿದಿನ ಮಾನವ ತಪ್ಪಿ ನಡೆದಾಗ ತಿದ್ದಿಕೊಂಡು ಮುಂದೆ ಸಾಗಬೇಕು. ಯೋಗಿ ವೇಮನ ಮೊದಲಿನಿಂದಲೂ ಸತ್ಯಪ್ರಿಯ. ಜಗದಲ್ಲಿ ಎಲ್ಲರೂ ಸಮಾನರು. ಮೇಲಿಲ್ಲ-ಕೀಳಿಲ್ಲ ಎಂಬುದನ್ನು ಹೇಳುತ್ತಾ ಎಲ್ಲಾ ಜಾತಿಗಳು ಹಿರಿತನವನ್ನು ಪೊಳ್ಳು ಎಂದು ಸಾರಿದ. ಜಾತಿ ವ್ಯವಸ್ಥೆಯನ್ನು ಖಂಡಿಸಿದ. ಸಮಾನತೆಯಿಂದ, ಸಾಮರಸ್ಯದಿಂದ ಬದುಕಿದಾಗ ಮಾತ್ರ ಮನುಷ್ಯನ ಬಾಳು ಬೆಳಕಾಗುತ್ತದೆ ಎಂದು ಶ್ರೀಗಳು ನುಡಿದರು.

ಬಸವರಾಜ ಹೊರಟ್ಟಿಯವರು ಈಗಾಗಲೇ ಅವ್ವ ಸೇವಾ ಟ್ರಸ್ಟಿನ ವತಿಯಿಂದ 1 ಲಕ್ಷ 10 ಸಾವಿರ ರೂಪಾಯಿ ದತ್ತಿನಿಧಿ ಇಟ್ಟಿದ್ದರು. ಹೆಚ್ಚುವರಿಯಾಗಿ 3 ಲಕ್ಷ ರೂಪಾಯಿಗಳನ್ನು ದತ್ತಿನಿಧಿಯಾಗಿ ನೀಡಿದ್ದಾರೆ. ಈ ದತ್ತಿನಿಧಿಯಿಂದ ಪ್ರಸ್ತುತ ಸಮಾಜಕ್ಕೆ ಅವ್ವನ ಪಾತ್ರ ಮತ್ತು ಮಹತ್ವ ಅರಿಯಲು ಸಾಕಷ್ಟು ಪ್ರೇರಕ ಶಕ್ತಿಯಾಗಿದೆ. ಎಸ್.ಎಸ್.ಎಲ್.ಸಿ. ಪರೀಕ್ಷೆ ಇನ್ನೂ 59 ದಿನ ಮಾತ್ರ ಉಳಿದಿದೆ. ಮಕ್ಕಳು ಚೆನ್ನಾಗಿ ಏಕಾಗ್ರತೆಯಿಂದ ಓದಬೇಕು, ಭಯಪಡಬಾರದು. ಆತ್ಮವಿಶ್ವಾಸದಿಂದ ಪರೀಕ್ಷೆ ಬರೆದು ಉತ್ತಮ ಫಲಿತಾಂಶ ಗಳಿಸಬೇಕೆಂದು ಶ್ರೀಗಳು ಶುಭಹಾರೈಸಿದರು.



ಅವ್ವ ಸೇವಾ ಟ್ರಸ್ಟಿನ ಗದಗ ಸಂಚಾಲಕರಾದ ಡಾ. ಬಸವರಾಜ ಧಾರವಾಡ ಅವರು ಎಸ್.ಎಸ್.ಎಲ್.ಸಿ. ಸಂವಾದ ಕಾರ್ಯಕ್ರಮ ಉದ್ಘಾಟನೆ ಮಾಡಿ ಮಾತನಾಡಿ, ಕಳೆದ 14 ವರ್ಷಗಳಿಂದ ಸಭಾಪತಿ ಬಸವರಾಜ ಹೊರಟ್ಟಿಯವರ ನೇತೃತ್ವದ ಅವ್ವ ಸೇವಾ ಟ್ರಸ್ಟ್ ಅಸಹಾಯಕರಿಗೆ, ಪ್ರತಿಭಾವಂತರಿಗೆ ಆಸರೆಯಾಗಿ ಧನಸಹಾಯ ಮಾಡುತ್ತಾ 'ಅವ್ವನ ಪ್ರೀತಿ'ಯನ್ನು ಉಣಿಸುತ್ತಿದೆ ಎಂದರು.

ಉಪನ್ಯಾಸಕರಾಗಿ ಆಗಮಿಸಿದ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಮಾತನಾಡಿ, ವೇಮನರ ಪದ್ಯಗಳು ಸಮಾಜದಲ್ಲಿನ ಮೌಢ್ಯ, ಅಂಧಶ್ರದ್ಧೆ, ಮೇಲು-ಕೀಳು ಎಂಬ ಭಾವವನ್ನು ತೊಡೆದು ಹಾಕುವಲ್ಲಿ ದಾರಿದೀಪವಾಗಿವೆ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡವಿನಮನಿ, ಕ್ಷೇತ್ರ ಶಿಕ್ಷಣಾಧಿಕಾರಿ ಮಂಗಳಾ ತಾಪಸ್ಕರ, ಶಂಕರ ಹಡಗಲಿ ಸ.ನಿ. ಅಕ್ಷರ ದಾಸೋಹ ಗದಗ ಹಾಗೂ ಶಿಕ್ಷಣ ಸಂಯೋಜಕ ಮುರುಳಿ ಸೊಲ್ಲಾಪುರ ಉಪಸ್ಥಿತರಿದ್ದರು.

ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ್ ಸುತಾರ ಸಂಗೀತ ಸೇವೆ ನೀಡಿದರು. ಧರ್ಮಗ್ರಂಥ ಪಠಣ ತೆಹರಿನ್ ಖವಾಸ, ವಚನ ಚಿಂತನವನ್ನು ಕೀರ್ತಿರಾಜ್ ಹೂಗಾರ ನೆರವೇರಿಸಿದರು. ದಾಸೋಹ ಸೇವೆಯನ್ನು ಚಂದ್ರಶೇಖರ ಶರಣಪ್ಪ ಅಂಗಡಿ ವಹಿಸಿಕೊಂಡಿದ್ದರು.

ಎಸ್.ಎಸ್.ಎಲ್.ಸಿ. ವಿದ್ಯಾರ್ಥಿಗಳ ಪರೀಕ್ಷಾ ಫಲಿತಾಂಶ ಸುಧಾರಣೆಗಾಗಿ ಸಂವಾದ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಸೆಲ್ವಾಸಿ, ಗಂಗಾಧರ, ಕೆ.ವಿ. ಕೊರಡ್ಡಿ, ಸಿ.ಎಸ್. ಮಾನ್ವಿ, ಉಮೇಶ್ ನಿಪ್ಪಾಣಿಕರ್, ಎಂ.ಐ. ಶಿವನಗೌಡ್ರ, ಸತೀಶ ಹೊಂಬಾಳೆ ಹಾಜರಿದ್ದರು. ಸಮಿತಿಯ ಚೇರಮನ್ ಐ.ಬಿ. ಬೆನಕೊಪ್ಪ ಮಕ್ಕಳ ಸಂವಾದ ಕಾರ್ಯಕ್ರಮವನ್ನು ಆಯೋಜನೆ ಮಾಡಿ ಹಲವಾರು ಪ್ರಶ್ನೆಗಳಿಗೆ ಪರಿಹಾರ ಸೂಚಿಸಿದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಉಪಾಧ್ಯಕ್ಷ ಡಾ. ಉಮೇಶ ಪುರದ, ವಿದ್ಯಾ ಗಂಜಿಹಾಳ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಹಕಾರ್ಯದರ್ಶಿ ಸೋಮನಾಥ ಪುರಾಣಿಕ, ನಾಗರಾಜ್ ಹಿರೇಮಠ, ಸಂಘಟನಾ ಕಾರ್ಯದರ್ಶಿ ಮಹೇಶ್ ಗಾಣಿಗೇರ, ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ ಸೇರಿದಂತೆ ಶ್ರೀಮಠದ ಸದ್ಭಕ್ತರು ಉಪಸ್ಥಿತರಿದ್ದರು.

ಸಹ ಚೇರಮನ್ ಶಿವಾನಂದ ಹೊಂಬಳ ಸ್ವಾಗತಿಸಿದರು. ವಿದ್ಯಾ ಪ್ರಭು ಗಂಜಿಹಾಳ ನಿರೂಪಿಸಿದರು.

# ವ್ಯಕ್ತಿತ್ವ ವಿಕಸನ ನಿತ್ಯದ ಪ್ರಕ್ರಿಯೆಯಾಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ತಮ್ಮ ಕೌಶಲ್ಯಗಳ ಮೂಲಕ ಮತ್ತೊಬ್ಬರನ್ನು ತಮ್ಮೆಡೆಗೆ ಆಕರ್ಷಿಸುವಂತಹ ವ್ಯಕ್ತಿತ್ವವನು ರೂಪಿಸಿಕೊಳ್ಳಬೇಕು. ವ್ಯಕ್ತಿತ್ವ ವಿಕಸನ ನಿತ್ಯದ ಪ್ರಕ್ರಿಯೆಯಾಗಲಿ ಎಂದು ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ ಹೇಳಿದರು.

ಗದಗ ಜಿಲ್ಲಾ ಪಂಚಾಯತ್ ಹಾಗೂ ಗ್ರಾಮ ಡಿ.ಜಿ. ವಿಕಸನ ಕಾರ್ಯಕ್ರಮದಡಿ ಬುಧವಾರ ಜಿಲ್ಲೆಯ ಗದಗ, ರೋಣ ಹಾಗೂ ಗಜೇಂದ್ರಗಡ ತಾಲೂಕಿನ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಒಂದು ದಿನದ ವ್ಯಕ್ತಿತ್ವ ವಿಕಸನ ವಿಷಯದ ವಿಶೇಷ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.



ಮುಖ್ಯ ಅತಿಥಿಗಳಾಗಿ ಜಿ.ಪಂ ಯೋಜನಾ ನಿರ್ದೇಶಕ ಎಮ್.ವಿ. ಚಳಗೇರಿ, ಗ್ರಾಮ ಡಿಜಿ ವಿಕಸನ ಜಿಲ್ಲಾ ಸಂಯೋಜಕ ಬಸವರಾಜ್ ಬಡಿಗೇರ್, ತರಬೇತಿದಾರ ಕಲ್ಮೇಶಯು, ಶರಣಪ್ಪ ಕಟ್ಟಿಮನಿ ಹಾಜರಿದ್ದರು. ಪ್ರಸ್ತುತ, ಜಿಲ್ಲೆಯಲ್ಲಿ 95 ಗ್ರಾಮ ಪಂಚಾಯಿತಿ ಅರಿವು ಕೇಂದ್ರಗಳನ್ನು ಗ್ರಾಮ ಡಿಜಿ ವಿಕಸನ ಕಾರ್ಯಕ್ರಮ ಶಿಕ್ಷಣ ಫೌಂಡೇಶನ್ ಅನುಷ್ಠಾನ ಮಾಡಿರುವುದು ವಿಶೇಷವಾಗಿದೆ.

ವ್ಯಕ್ತಿತ್ವ ವಿಕಸನ ಎನ್ನುವುದು ನಿತ್ಯ ನಡೆಯುವಂತಹ ಪ್ರಕ್ರಿಯೆ, ಶಿಕ್ಷಣ, ಕ್ರೀಡೆ, ಚಿತ್ರಕಲೆ, ಸಂಗೀತ, ನಾಟಕ..ಹೀಗೆ ಪ್ರತಿ ಕ್ಷೇತ್ರದ ಚಟುವಟಿಕೆಯಲ್ಲೂ ನಿತ್ಯ ಭಾಗಿಯಾಗುವ ಮೂಲಕ ವಿದ್ಯಾರ್ಥಿಗಳು ತಮ್ಮ ವ್ಯಕ್ತಿತ್ವವನ್ನು ವಿಕಸನಗೊಳಿಸುತ್ತಾ ಸಾಗಬೇಕು. ಆಗ ಮಾತ್ರ ಪರಿಪೂರ್ಣ ವ್ಯಕ್ತಿಯಾಗಿ ಹೊರಹೊಮ್ಮಲು ಸಾಧ್ಯ, ಎಲ್ಲರೂ ನಿತ್ಯ ಒಂದೊಂದು ಗುಣಾತ್ಮಕ ಚಿಂತೆಯನ್ನು ಮೈಗೂಡಿಸಿಕೊಳ್ಳಬೇಕು, ಉತ್ತಮ ಆಲೋಚನೆಗಳಿಂದ ಜೀವನ ಯಾವುದೇ ಪರೀಕ್ಷೆಗಳನ್ನು ಧೈರ್ಯವಾಗಿ ಎದುರಿಸಬಹುದು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿ ಮನುಷ್ಯನ ವ್ಯಕ್ತಿತ್ವ ವಿಕಸನಕ್ಕೆ ಶಿಕ್ಷಣವೇ ಭದ್ರಬುನಾದಿಯಾಗಿದೆ ಇದು ಮನೆ ಹಾಗೂ ಸಮುದಾಯ ಹಂತದಲ್ಲಿ ಸುಭದ್ರವಾಗಿ ನಿರ್ಮಿಸಿದಾಗ ಎಲ್ಲರ ಭವಿಷ್ಯ ಉತ್ತಮವಾಗುತ್ತದೆ ಎಂದರು.



ಹಿಂದೂ ಮಹಾಸಭಾ ಗಣಪತಿ ವತಿಯಿಂದ ಅಯೋಧ್ಯೆಯ ಶ್ರೀರಾಮ ಮಂದಿರದ 1ನೇ ವರ್ಷದ ವಾರ್ಷಿಕೋತ್ಸವವನ್ನು ಶ್ರೀ ಹಾವಳಿ ಆಂಜನೇಯ ದೇವಸ್ಥಾನದ ಮುಂಭಾಗದಲ್ಲಿ ಆಚರಿಸಲಾಯಿತು.

# ನಾನು ರಾಜ್ಯಾಧ್ಯಕ್ಷ ಸ್ಥಾನದ ಆಕಾಂಕ್ಷಿಯಲ್ಲ



■ವಿಜಯಸಾಕ್ಷಿ ಸುದ್ದಿ, ಹಾವೇರಿ

ನಾನು ಪಕ್ಷದ ರಾಜ್ಯಾಧ್ಯಕ್ಷ ಸ್ಥಾನದ ಆಕಾಂಕ್ಷಿ ಅಲ್ಲ. ಪಕ್ಷವನ್ನು ಒಂದುಗೂಡಿಸುವುದರಲ್ಲಿ ಮುಂದಾಗುವೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ. ಹಾವೇರಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನಕ್ಕೆ ತಮ್ಮ ಹೆಸರು ಕೇಳಿ ಬಂದಿದೆ ಎನ್ನುವ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಸಾಮಾಜಿಕ ಜಾಲತಾಣದಲ್ಲಿ ನನ್ನ ಹೆಸರು ನಿಮ್ಮ ಹೆಸರು ಕೇಳಿ ಬರುತ್ತದೆ. ಅದೆಲ್ಲಾ ಏನೂ ಮಹತ್ವ ಅಲ್ಲ, ನಾನೇನು ಆಕಾಂಕ್ಷಿ ಅಲ್ಲ. ಪಕ್ಷವನ್ನು ಒಂದುಗೂಡಿಸುವುದರಲ್ಲಿ ಮುಂದಾಗುವೆ ಎಂದರು.

ಪಕ್ಷ ಸಂಘಟನೆಯಲ್ಲಿ ಎಲ್ಲರಿಗೂ ಶಕ್ತಿಯಿದೆ. ಎಲ್ಲರೂ ಕೂಡಿದಾಗಲೇ ಒಗ್ಗಟ್ಟಿನ ಶಕ್ತಿ ಆಗುತ್ತದೆ. ಒಬ್ಬಂಟಿಯಾಗಿ ಪಕ್ಷ ಕಟ್ಟುವ ಭ್ರಮೆ ನಮ್ಮಲ್ಲಿ ಇಲ್ಲ. ಎಲ್ಲರೂ ಸೇರಿ ಮಾಡಿದಾಗ ಶಕ್ತಿ ಬರುತ್ತದೆ. ಬಿಜೆಪಿ ಜನಮಾನಸದಲ್ಲಿ ಇರುವಂತ ಪಕ್ಷ. ಅದಕ್ಕಾಗಿ ಒಮ್ಮೊಮ್ಮೆ ಪೈಪೋಟಿ ಇರುತ್ತದೆ. ಇಂತಹ ಸಮಯದಲ್ಲಿ ಸೌಹಾರ್ದತೆಯಿಂದ ಪಕ್ಷದ ಹಿರಿಯರು ಮಾರ್ಗದರ್ಶನ ಮಾಡುತ್ತಾರೆ. ಹಿರಿಯರ ಮಾರ್ಗದರ್ಶನದಲ್ಲಿ ನಾವು ನಡೆಯುಬೇಕಾಗುತ್ತದೆ. ಮೇಲಿಂದ ಶಿವರಾಜ ಸಿಂಗ್ ಚೌಹಾಣ್ ಬರುತ್ತಾರೆ. ಅವರ ಮಾರ್ಗದರ್ಶನದಲ್ಲಿ ಸೌಹಾರ್ದತೆಯಿಂದ ಚುನಾವಣೆ ಆಗುತ್ತದೆ ಎಂದು ಹೇಳಿದರು.

### ಸೌಹಾರ್ದಯುತ ಬಗೆ ಹರಿಸುವ ಪ್ರಯತ್ನ

ಮಾಜಿ ಸಚಿವ ಶ್ರೀರಾಮುಲು ಹಾಗೂ ಶಾಸಕ ಜನಾರ್ದನ ರೆಡ್ಡಿ ನಡುವೆ ನಡೆಯುತ್ತಿರುವ ವಾಕ್ ಸಮರದ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಶ್ರೀರಾಮುಲು ಹಾಗೂ ರೆಡ್ಡಿ ಅವರು ನಮಗಿಂತ ನಿಮಗಿಂತಾ ಹಳೆಯ, ಆತ್ಮೀಯ ಸ್ನೇಹಿತರು. ನಮ್ಮ ಆತ್ಮೀಯ ಸ್ನೇಹಿತರಲ್ಲಿ ಒಮ್ಮೊಮ್ಮೆ ಗ್ಯಾಪ್ ಬರುತ್ತದೆ. ಸ್ನೇಹ ಅಂತಿಮವಾಗಿ ಗೆಲ್ಲುತ್ತದೆ. ಇದೆಲ್ಲಾ ಸರಿಯಾಗುತ್ತದೆ. ಜನಾರ್ದನ ರೆಡ್ಡಿ ಹತ್ತಿರ ಮಾತನಾಡುವೆ. ಪಕ್ಷದ ದೃಷ್ಟಿಯಿಂದ ಇಬ್ಬರ ಹತ್ತಿರ ಸೌಹಾರ್ದ ಭೇಟಿಯಾಗಿ ಸಮಸ್ಯೆ ಬಗೆಹರಿಸುವ ಪ್ರಯತ್ನ ಮಾಡುವೆ ಎಂದು ಬೊಮ್ಮಾಯಿ ಹೇಳಿದರು.

### ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದಿಂದ ಜ.26ರಂದು ಬೆಳಗಾವಿಯಲ್ಲಿ ಸಮಾವೇಶ

# ಉದ್ಯಮಗಳಲ್ಲಿ ಕನ್ನಡಿಗರನ್ನು ಕಡೆಗಣಿಸದಿರಿ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದಿಂದ ಜನವರಿ 26ರಂದು ಬೆಳಗಾವಿಯ ಸರ್ದಾರ್ ಹೈಸ್ಕೂಲ್ ಮೈದಾನದಲ್ಲಿ ಉದ್ಯೋಗಕ್ಕಾಗಿ ಕನ್ನಡಿಗರ-ಯುವಜನರ ಹಕ್ಕೊತ್ತಾಯ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಕೆಆರ್‌ಎಸ್ ಜಿಲ್ಲಾಧ್ಯಕ್ಷ ವೀರನಗೌಡ ಮೂಗನೂರ ಹೇಳಿದರು.

ಗುರುವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಸರಕಾರದ ದುರಾಡಳಿತ, ಭ್ರಷ್ಟಾಚಾರ ರಾಜ್ಯದಲ್ಲಿ ನಿರುದ್ಯೋಗ ವ್ಯಾಪಕವಾಗಿ ವೃದ್ಧಿಸಲು ಕಾರಣವಾಗಿದೆ. ತಂತ್ರಜ್ಞಾನದ ಅತಿಯಾದ ಬಳಕೆಯಿಂದ ಅನೇಕ ಉದ್ಯೋಗಗಳು ಅಸ್ತಿತ್ವ ಕಳೆದುಕೊಳ್ಳುತ್ತಿವೆ. ಈ ಸಮಸ್ಯೆ





ನಿವಾರಿಸಿ, ರಾಜ್ಯದ ಜನರಿಗೆ ಹೆಚ್ಚಿನ ಉದ್ಯೋಗಾವಕಾಶಗಳು ಲಭ್ಯವಾಗುವಂತೆ ಮಾಡಬೇಕಾದ ಅನಿವಾರ್ಯತೆ ಇದೆ. ಈ ಹಿನ್ನೆಲೆಯಲ್ಲಿ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದರು.

ರಾಜ್ಯ ಸರಕಾರದಲ್ಲಿ ಸುಮಾರು 3 ಲಕ್ಷ ಉದ್ಯೋಗಗಳು ಖಾಲಿ ಇವೆ. ಇನ್ನು, ರಾಜ್ಯದೆಲ್ಲೆಡೆ ಸ್ಥಾಪನೆಯಾಗುವ ಹಾಗೂ ಈಗಾಗಲೇ ಕಾರ್ಯನಿರ್ವಹಿಸುತ್ತಿರುವ ಉದ್ಯಮಗಳಲ್ಲಿ ಕನ್ನಡಿಗರನ್ನು ಕಡೆಗಣಿಸಲಾಗುತ್ತಿದೆ. ಜೊತೆಗೆ ಸರಕಾರ ಖಾಯಂ ನೇಮಕಾತಿ ಮಾಡದೇ ಅವಶ್ಯಕತೆಗೆ ಅನುಗುಣವಾಗಿ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಂಡು ಜೀತ ಪದ್ಧತಿ ಅನುಸರಿಸುತ್ತಿದೆ. ಇದಕ್ಕೆ ಕಡಿವಾಣ ಹಾಕುವ ಉದ್ದೇಶದೊಂದಿಗೆ ಸರಕಾರವನ್ನು ಎಚ್ಚರಿಸಲು ಈ ಸಮಾವೇಶ ಆಯೋಜಿಸಲಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಬಸಪ್ಪ ಅರಗಂಜಿ, ಫಕೀರಗೌಡ ತಮ್ಮನಗೌಡ್ರ, ಫಾರೂಕ್ ಕಟ್ಟಿಮನಿ, ಖಾದರ್ ತೆಕ್ಕಲಕೋಟೆ, ಮೌಲಾಸಾಬ ಪೆಂಡಾರಿ, ಆರೀಫ್ ಮುಳಗುಂದ, ಸುರೇಶ ಮುಳಗುಂದ, ಮಂಜುನಾಥ ಬೊಮ್ಮನಗೌಡ್ರ, ಸದ್ದಾಮ್ ವಾಲೀಕಾರ, ಶಿವಕುಮಾರ ಕರಬಶೆಟ್ಟರ್, ಎಸ್.ಎನ್. ಪಾಟೀಲ ಉಪಸ್ಥಿತರಿದ್ದರು.

# ನಿಧನ



**ಹಸನಸಾಬ್ ಬುವಾಜಿ**

**ಗದಗ:** ತಾಲೂಕಿನ ಹುಲಕೋಟಿ ಗ್ರಾಮದ ನಿವಾಸಿ ಹಾಗೂ ಹೆಸರಾಂತ ನಿವೃತ್ತ ಶಿಕ್ಷಕರಾದ ಹಸನಸಾಬ ದಸ್ತಗಿರಸಾಬ ಬುವಾಜಿ (88) ಅವರು 23-01-2025ರ ಗುರುವಾರ ಸಂಜೆ 4 ಗಂಟೆಗೆ ನಿಧನರಾದರು.

ಮೃತರು ಪತ್ನಿ, ಪುತ್ರಿ ಹಾಗೂ ಮೊಮ್ಮಕ್ಕಳನ್ನು ಅಗಲಿದ್ದಾರೆ. ಮೃತರ ಅಂತಿಮಯಾತ್ರೆ 24-01-2024ರ ಶುಕ್ರವಾರ ಬೆಳಿಗ್ಗೆ 10.30ಕ್ಕೆ ಅಧ್ಯಾಪಕ ನಗರದಲ್ಲಿರುವ ಸ್ವಗೃಹದಿಂದ ಹೊರಡಲಿದೆ.

**ಸಂತಾಪ:** ಬುವಾಜಿ ಶಿಕ್ಷಕರ ನಿಧನಕ್ಕೆ ಸಚಿವ ಎಚ್. ಕೆ. ಪಾಟೀಲ, ಮಾಜಿ ಶಾಸಕ ಡಿ. ಆರ್. ಪಾಟೀಲ. ಗ್ರಾಮದ ಹಿರಿಯರಾದ ಎಮ್. ಆರ್. ಪಾಟೀಲ. ಚಂದ್ರಪ್ಪ ಕರಿಕಟ್ಟಿ, ಮೋಹನ ದುರಗಣ್ಣವರ ಹಾಗೂ ಅಪಾರ ಶಿಷ್ಯ ಬಳಗ ಕಂಬನಿ ಮಿಡಿದಿದ್ದಾರೆ.

### ತಾಲೂಕಾ ಕೇಂದ್ರಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ಸುಧಾರಣೆ ಯಾವಾಗ: ಸಾರ್ವಜನಿಕರ ಪ್ರಶ್ನೆ

# ಬೈಪಾಸ್ ಸಂಪರ್ಕ ರಸ್ತೆಗೆ ತೇಪೆ ಭಾಗ್ಯ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ವಿಧಾನಸಭಾ ಮತಕ್ಷೇತ್ರದ ಕೇಂದ್ರಸ್ಥಾನ ಹಾಗೂ ತಾಲೂಕಾ ಕೇಂದ್ರಸ್ಥಾನವಾಗಿದೆ. ಇತ್ತೀಚೆಗೆ ಗದಗ-ಹೊನ್ನಾಳಿ ರಾಜ್ಯ ರಸ್ತೆ ನಿರ್ಮಾಣವಾಗಿದೆ, ಆದರೆ ಶಿರಹಟ್ಟಿ ತಾಲೂಕಾ ಕೇಂದ್ರಕ್ಕೆ ಹೆದ್ದಾರಿ ಬೈಪಾಸ್‌ನಿಂದ ಸಂಪರ್ಕ ಕಲ್ಪಿಸುವ ರಸ್ತೆಯು ಸಮರ್ಪಕ ಸುಧಾರಣೆ ಯಾವಾಗ ಎಂದು ಜನತೆ ಕಾಯುತ್ತಿದ್ದಾರೆ.

ಗದಗ ಜಿಲ್ಲಾ ಕೇಂದ್ರದಿಂದ ಪ್ರಾರಂಭವಾಗಿ ಹೊನ್ನಾಳಿವರೆಗೂ ಸಾಗುವ ಈ ರಾಜ್ಯ ಹೆದ್ದಾರಿಯು ಶಿರಹಟ್ಟಿಯ ಹೊರವಲಯದಲ್ಲಿ ಹಾದು ಹೋಗಿದೆ. ಕೆಲವು ಗ್ರಾಮಗಳಲ್ಲಿ ಸಂಪರ್ಕ ಕಲ್ಪಿಸುವ ರಸ್ತೆಯನ್ನು ನಿರ್ಮಾಣ ಮಾಡಲಾಗಿದ್ದು, ಶಿರಹಟ್ಟಿ ತಾಲೂಕಾ ಕೇಂದ್ರಕ್ಕೆ ಸೊರಟೂರನಿಂದ ಸಂಪರ್ಕ ಕಲ್ಪಿಸುವ ರಸ್ತೆಯು ಸಮತಟ್ಟಾಗಿಲ್ಲ. ಆದಾಗ್ಯೂ ಪ್ಯಾಚ್‌ಅಪ್‌ಗಳನ್ನು ಮಾಡಲಾಗಿದೆ. ಮುಂಡರಗಿ ಕಡೆಯಿಂದ ಬರುವ ರಸ್ತೆಯನ್ನು ಸಹ ಬರೀ ಪ್ಯಾಚ್‌ಅಪ್ ಮಾಡಿದೆ.



ಇನ್ನು, ತಾಲೂಕಾ ಕೇಂದ್ರದಿಂದ ಬೆಳ್ಳಟ್ಟಿ ಕಡೆಗೆ ರಾಜ್ಯ ಹೆದ್ದಾರಿ ಸಂಪರ್ಕ ಕಲ್ಪಿಸುವ ರಸ್ತೆಯಲ್ಲಿ ಸ್ವಲ್ಪ ದೂರ ರಸ್ತೆ ಮಾಡಲಾಗಿದೆ. ಪೂರ್ಣ ಪ್ರಮಾಣದಲ್ಲಿ ಮಾಡಿಲ್ಲ. ಇಲ್ಲಿ ಪ್ಯಾಚ್‌ಅಪ್‌ಗಳನ್ನು ಸಹ ಮಾಡಿಲ್ಲ. ಆದ್ದರಿಂದ ತಾಲೂಕಾ ಕೇಂದ್ರದ ಸಂಪರ್ಕ ರಸ್ತೆ ಸುಧಾರಣೆ ಏಕಿಲ್ಲ ಎಂದು ಜನತೆ ಪ್ರಶ್ನಿಸುತ್ತಿದ್ದು, ಅಧಿಕಾರಿಗಳಿಂದ ಮಾತ್ರ ಸಮರ್ಪಕ ಉತ್ತರ ಸಿಗುತ್ತಿಲ್ಲ.

ರಾಜ್ಯ ಹೆದ್ದಾರಿ ನಿರ್ಮಾಣ ಮಾಡುವ ಸಮಯದಲ್ಲಿ ಶಿರಹಟ್ಟಿ ಪಟ್ಟಣಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಗಳಿಂದ ನಿತ್ಯವೂ ನೂರಾರು ಭಾರವಾದ ವಾಹನಗಳು ಸಂಚರಿಸಿದ್ದರಿಂದ ಸುಗಮವಾಗಿದ್ದ ರಸ್ತೆಗಳು ಹಾಳಾಗಿ ಹೋಗಿದ್ದು, ಈ ಬಗ್ಗೆ ಸ್ಥಳೀಯ ಹಲವು ಸಂಘಟನೆಗಳು ಮನವಿ ಸಲ್ಲಿಸಿದ್ದರೂ ಸಹ ಇಲ್ಲಿಯವರೆಗೂ ರಸ್ತೆ ಸುಧಾರಣೆ ಆಗದೇ ಇರುವುದು ಮತ್ತು ಹೆದ್ದಾರಿ ರಸ್ತೆ ನಿರ್ಮಾಣ ಮುಗಿದ ಮೇಲೆ ತಾಲೂಕಾ ಕೇಂದ್ರಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಗಳು ಸುಧಾರಣೆಯಾಗಬಹುದೆಂಬ ನಿರೀಕ್ಷೆಯಲ್ಲಿದ್ದ ಜನತೆಗೆ ನಿರಾಸೆಯಾಗಿದೆ.

ಈ ಕುರಿತು ಪ್ರತಿಕ್ರಿಯಿಸಿದ ಪ.ಪಂ ಮಾಜಿ ಅಧ್ಯಕ್ಷ ನಾಗರಾಜ ಲಕ್ಕುಂಡಿ, ಶಿರಹಟ್ಟಿ ತಾಲೂಕಾ ಕೇಂದ್ರಕ್ಕೆ ಸಂಪರ್ಕ ಕಲ್ಪಿಸುವ ಹಾಳಾದ ರಸ್ತೆಗಳನ್ನು ನಿರ್ಮಿಸಿಕೊಡುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಮನವಿಯನ್ನು ಸಲ್ಲಿಸಲಾಗಿತ್ತು. ಇಲ್ಲಿಯವರೆಗೂ ಕಾಟಾಚಾರಕ್ಕೆ ಎಂಬಂತೆ ಅಲ್ಲಲ್ಲಿ ಪ್ಯಾಚ್‌ಅಪ್‌ಗಳನ್ನು ಮಾತ್ರ ಮಾಡಿದ್ದು, ಸಂಪೂರ್ಣವಾಗಿ ರಸ್ತೆ ದುರಸ್ತಿಪಡಿಸಿಲ್ಲ. ಆದ್ದರಿಂದ ಈ ಕೂಡಲೇ ರಸ್ತೆ ನಿರ್ಮಿಸಿಕೊಡಬೇಕು, ಇಲ್ಲದೇ ಹೋದಲ್ಲಿ ಮುಂದಿನ ದಿನಗಳಲ್ಲಿ ಹೋರಾಟ ಮಾಡಲಾಗುವುದು ಎಂದರು.

ಈ ವಿಚಾರಕ್ಕೆ ಸಂಬಂಧಿಸಿ ಪ್ರತಿಕ್ರಿಯಿಸಿದ ಜಿ.ಪಂ ಮಾಜಿ ಅಧ್ಯಕ್ಷ ವಿಶ್ವನಾಥ ಕಪ್ಪತ್ತನವರ, ತಾ.ಪಂ ಮಾಜಿ ಸದಸ್ಯ ತಿಪ್ಪಣ್ಣ ಕೊಂಚಿಗೇರಿ, ಹೆದ್ದಾರಿ ನಿರ್ಮಾಣ ಮಾಡುವ ಸಂದರ್ಭದಲ್ಲಿ ಸುಗಮವಾಗಿದ್ದ ರಸ್ತೆಗಳು ಹಾಳಾಗಿದ್ದು, ಈ ಕೂಡಲೇ ಸಂಬಂಧಿಸಿದ ಅಧಿಕಾರಿಗಳು ರಸ್ತೆ ಸರಿಪಡಿಸಬೇಕು. ಅಧಿಕಾರಿಗಳ ಈ ನಿರ್ಲಕ್ಷ್ಯ ಧೋರಣೆಯನ್ನು ಸಂಸದ ಹಾಗೂ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಅವರ ಗಮನಕ್ಕೆ ತರಲಾಗುವುದು ಎಂದರು.

# ಜ.29ರಂದು ನೇರ ಸಂದರ್ಶನ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ನೇರ ಸಂದರ್ಶನವಿದ್ದು ಜನವರಿ 29 ರಂದು ಬೆಳಿಗ್ಗೆ 09–30 ಗಂಟೆಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ರೂಮ್ ನಂ. 215 ಎರಡನೇ ಮಹಡಿ ಜಿಲ್ಲಾಡಳಿತ ಭವನ ಹುಬ್ಬಳ್ಳಿ ರೋಡ್ ಗದಗ ಇಲ್ಲಿ ನೇರ ಸಂದರ್ಶನ ಹಮ್ಮಿಕೊಳ್ಳಲಾಗಿದೆ.

ಸದರಿ ನೇರ ಸಂದರ್ಶನದಲ್ಲಿ ಎಎಚ್ ಪಿ ಅಪೇರಲ್ ಪ್ರೈವೇಟ್ ಲಿಮಿಟೆಡ್, ಹಾಸನ ಈ ಕಂಪನಿ ಭಾಗವಹಿಸಲಿದೆ.

ವಿದ್ಯಾರ್ಹತೆ: ಎಸ್.ಎಸ್.ಎಲ್.ಸಿ, ಪಿಯುಸಿ, ಐಟಿಐ, ಡಿಪ್ಲೋಮೊ ಮತ್ತು ಪದವಿ.

**ಹುದ್ದೆ** : ಆಪರೇಟರ್, ಹೇಲ್ಪರ್, ಸೂಪರ್‌ವೈಜರ್

**ವಯಸ್ಸು** : 18 ರಿಂದ 45 ರೊಳಗಿರಬೇಕು.

ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಭಾಗವಹಿಸಬಹುದು.

ಮಹಿಳಾ ಅಭ್ಯರ್ಥಿಗಳಿಗೆ ಟೈಲರಿಂಗ್ ಹುದ್ದೆಗಳಿಗೆ ಮಾತ್ರ ಅವಕಾಶವಿರುತ್ತದೆ.

ನೇರ ಸಂದರ್ಶನದಲ್ಲಿ ಪಾಲ್ಗೊಳ್ಳುವ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆಯ ಅಂಕಪಟ್ಟಿಗಳ ಝೆರಾಕ್ಸ್ ಪ್ರತಿಗಳು, 2 ರೆಸ್ಯೂಮ್ (ಬಯೋಡಾಟಾ) ಪ್ರತಿಗಳು, ಮತ್ತು ಆಧಾರ್ ಕಾರ್ಡ್ ಝೆರಾಕ್ಸ್‌ನೊಂದಿಗೆ ಭಾಗವಹಿಸಬಹುದು.

ನೇರ ಸಂದರ್ಶನದಲ್ಲಿ ಭಾಗವಹಿಸಿದ ಅಭ್ಯರ್ಥಿಗಳಿಗೆ ನೋಂದಣಿ ಕಡ್ಡಾಯವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ, 08372220609, 6363330688, ಕ್ಕೆ ಸಂಪರ್ಕಿಸಲು ಕೋರಲಾಗಿದೆಯೆಂದು ಜಿಲ್ಲಾ ಉದ್ಯೋಗಾಧಿಕಾರಿಯಾದ ಬಸವಂತ ಪಿ ಎನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ನೇರ ಸಂದರ್ಶನದಲ್ಲಿ ಭಾಗವಹಿಸುವ ಅಭ್ಯರ್ಥಿಗಳು ನೋಂದಣಿಯನ್ನು ನೇರ ಸಂದರ್ಶನದ ದಿನದಂದೇ ಮಾಡಿಸಬೇಕಾಗಿರುತ್ತದೆ.

# ಅಂದಪ್ಪ ಬೆಲ್ಲದ ನಿಧನಕ್ಕೆ ಶ್ರದ್ಧಾಂಜಲಿ



■ ವಿಜಯಸಾಕ್ಷಿ ಸುದ್ದಿ, ಗದಗ

ಜ.ಅನ್ನದಾನೀಶ್ವರ ವಿದ್ಯಾ ಸಮಿತಿ ಮುಂಡರಗಿಯ ಉಪಾಧ್ಯಕ್ಷರಾಗಿ, ಗೌರವ ಕಾರ್ಯದರ್ಶಿಗಳಾಗಿ ಸೇವೆ ಸಲ್ಲಿಸಿದ ಶಿಕ್ಷಣ ಪ್ರೇಮಿ ಅಂದಪ್ಪ ಕಲ್ಲಪ್ಪ ಬೆಲ್ಲದ ಅವರ ನಿಧನಕ್ಕೆ ನರಸಾಪೂರದ ಎಸ್.ಜೆ.ಎ.ವ್ಹಿ.ಎಸ್ ಪ್ರೌಢಶಾಲೆಯಲ್ಲಿ ಶ್ರದ್ಧಾಂಜಲಿ ಸಲ್ಲಿಸಿ ಮೃತರ ಆತ್ಮಕ್ಕೆ ಶಾಂತಿ ಕೋರಲಾಯಿತು. ಶಾಲಾ ಮುಖ್ಯೋಪಾಧ್ಯಾಯ ಎಂ.ಎಚ್. ಪೂಜಾರ, ಪ್ರಾಚಾರ್ಯ ಅನ್ನದಾನಿ ಹಿರೇಮಠ ಹಾಗೂ ಸಿಬ್ಬಂದಿ ವರ್ಗದವರು, ಜೆ.ಪಿ.ಶಿಕ್ಷಣ ಮಹಾವಿದ್ಯಾಲಯದ ಪ್ರಶಿಕ್ಷಣಾರ್ಥಿಗಳು, ಡಾ. ಬಸವರಾಜ ಧಾರವಾಡ, ಎಸ್.ಎಂ. ಅಂಗಡಿ, ಎಸ್.ಜಿ. ಕೋಲ್ಮಿ ಸಂತಾಪ ಸಭೆಯಲ್ಲಿ ಪಾಲ್ಗೊಂಡಿದ್ದರು.

### ಶ್ರೀ ಸಿದ್ಧರಾಮೇಶ್ವರರ ಜಯಂತ್ಯುತ್ಸವ, ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಸಂಸದ ಬಸವರಾಜ ಬೊಮ್ಮಾಯಿ

# ಸಿದ್ಧರಾಮೇಶ್ವರರು ಮನುಕುಲಕ್ಕೆ ಮಾದರಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸೂರ್ಯ – ಚಂದ್ರರಿರುವವರೆಗೂ ಭೋವಿ ಸಮಾಜವನ್ನು ಎಸ್‌ಸಿ ಮೀಸಲು ಪಟ್ಟಿಯಿಂದ ಕೈಬಿಡದಂತೆ ಕೇಂದ್ರ ಸರ್ಕಾರ ಮತ್ತು ಕೋರ್ಟ್‌ಗೆ ಕಾನೂನಾತ್ಮಕ ಶಿಫಾರಸ್ಸು ಮಾಡಿದ್ದೇನೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಅವರು ಪಟ್ಟಣದ ಶ್ರೀ ಜ. ರಂಭಾಪುರಿ ಸಮುಧಾಯಭವನದಲ್ಲಿ ಗುರುವಾರ ಸಮಾಜ ಕಲ್ಯಾಣ ಇಲಾಖೆ, ಕಂದಾಯ ಇಲಾಖೆ, ತಾ.ಪಂ, ಪುರಸಭೆ, ಇನ್ನಿತರ ಇಲಾಖೆಗಳು ಹಾಗೂ ಲಕ್ಷ್ಮೇಶ್ವರ ತಾಲೂಕಾ ಭೋವಿ ವಡ್ಡರ ಸಮಾಜ ಇವುರುಗಳ ಸಂಯುಕ್ತಾಶ್ರಯದಲ್ಲಿ ಕಾಯಕಯೋಗಿ ಶ್ರೀ ಸಿದ್ಧರಾಮೇಶ್ವರರ 852ನೇ ಜಯಂತ್ಯುತ್ಸವ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಪ್ರಧಾನಂತ್ರಿ ನರೇಂದ್ರ ಮೋದಿ ಅವರ ಶ್ರೇಷ್ಠ ಭಾರತ ನಿರ್ಮಾಣದ ಚಿಂತನೆಗಳು ಶ್ರೀ ಸಿದ್ಧರಾಮೇಶ್ವರರ ವಚನಗಳ ಸಾರದಲ್ಲಿ ಅಡಗಿವೆ. ಬಸವಣ್ಣನವರ ಕಾಯಕವೇ ಕೈಲಾಸ ಜೀವನ್ಮಂತ್ರವನ್ನು ಸಾರ್ವತ್ರೀಕರಣಗೊಳಿಸುವ ಜತೆಗೆ 4 ಸಾವಿರ ಕೆರೆಗಳನ್ನು, ಕೆರೆಯ ಪಕ್ಕ ದೇವಸ್ಥಾನಗಳನ್ನು ನಿರ್ಮಿಸಿ ಮನುಕುಲಕ್ಕೆ ಮಾದರಿಯಾಗಿದ್ದಾರೆ. ಶಿವಶರಣರಲ್ಲಿಯೇ ಶ್ರೇಷ್ಠರಾದ ಶ್ರೀ ಅಲ್ಲಮಪ್ರಭುಗಳು, ಬಸವಣ್ಣನವರ ಮೆಚ್ಚುಗೆಗೆ ಪಾತ್ರರಾಗಿದ್ದ ಶ್ರೀ ಸಿದ್ಧರಾಮೇಶ್ವರರು ತಮ್ಮ ಅನುಭಾವದ ವಚನಗಳ ಮೂಲಕ ಕಾಯಕದ ಮಹತ್ವ ಸಾರಿ, ಕಾಯಕನಿಷ್ಠ ಸಮಾಜ ನಿರ್ಮಿಸುವಲ್ಲಿ ಮುಖ್ಯ ಪಾತ್ರವಹಿಸಿದ್ದಾರೆ. ಸಮಾಜದ ಶ್ರೇಯೋಭಿವೃದ್ಧಿಗಾಗಿ ನನ್ನ ಅಧಿಕಾರಾವಧಿಯಲ್ಲಿ ಕೈಲಾದಮಟ್ಟಿಗಿನ ಸೇವೆ ಮಾಡಿರುವ ಸಂತೃಪ್ತಿಯಿದ್ದು ಸದಾ ಸಮಾಜದ ಜೊತೆಗಿರುತ್ತೇನೆ ಎಂದರು.



ಸಾನ್ನಿಧ್ಯ ವಹಿಸಿದ್ದ ಚಿತ್ರದುರ್ಗ ಬೋವಿವಡ್ಡರ ಸಂಸ್ಥಾನಮಠದ ಜ.ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಮಹಾಸ್ವಾಮಿಗಳು ಆಶೀರ್ವಚನ ನೀಡಿ ಮಾತನಾಡಿ, ಶಿವಯೋಗಿ ಸಿದ್ದರಾಮೇಶ್ವರರು ಕಾಯಕ ಸಿದ್ಧಾಂತದ ಮಹತ್ವ ಸಾರುವದರೊಂದಿಗೆ ಸಮಾಜದಲ್ಲಿನ ಅಸಮಾನತೆ, ವರ್ಣ, ಜಾತಿ, ಲಿಂಗಭೇದವನ್ನು ವಚನಗಳ ಮೂಲಕ ಹೋಗಲಾಡಿಸಿದರು. ಕಷ್ಟಗಳನ್ನು ಮೆಟ್ಟಿ ನಿಲ್ಲುವ ಶಕ್ತಿಯಿರುವ ಕಾಯಕ ಸಮಾಜಕ್ಕೆ ಎಂದೂ ಬಡತನ, ದುಃಖ ಬರುವುದಿಲ್ಲ. ಕಲ್ಲ ಬಂಡೆಗಳನ್ನು ಕಡಿದು ಮನೆ, ಮಠ, ದೇವಸ್ಥಾನ, ಸಮಾಜ ನಿರ್ಮಿಸುವ ಶ್ರೇಷ್ಠವಾದ ಕೆಲಸ ಮಾಡುವ ಭೋವಿ ಸಮಾಜ ಶ್ರೇಷ್ಠ ಸಮಾಜವಾಗಿದೆ. ಸಿದ್ಧರಾಮೇಶ್ವರರ ವಚನಗಳ ಆದರ್ಶ ಚಿಂತನೆ, ಮೌಲ್ಯಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು. ಸಮಾಜ ಬಾಂಧವರು ಸಂಘಟಿತರಾಗಬೇಕು. ಕೀಳರಿಮೆ ತೊರೆದು ತಮ್ಮ ವೃತ್ತಿಗೆ ಬಗ್ಗೆ ಹೆಮ್ಮೆ ಪಡಬೇಕು ಮತ್ತು ಮಕ್ಕಳಿಗೆ ಉತ್ತಮ ಶಿಕ್ಷಣ, ಸಂಸ್ಕಾರ ನೀಡಬೇಕು ಎಂದರು.

ಸಾಹಿತಿ ಎಫ್.ಎಸ್. ಕರಿದುರಗಣ್ಣವ ಉಪನ್ಯಾಸ ನೀಡಿದರು. ಭೋವಿ ವಡ್ಡರ ಸಂಘದ ಹಾವೇರಿ ಜಿಲ್ಲಾಧ್ಯಕ್ಷ ರವಿ ಪೂಜಾರ ಪ್ರಾಸ್ತಾವಿಕ ನುಡಿದರು. ಅತಿಥಿಗಳಾಗಿ ಮಾಜಿ ಶಾಸಕ ಗಂಗಣ್ಣ ಮಹಾಂತಶೆಟ್ಟರ, ಪುರಸಭೆ ಅಧ್ಯಕ್ಷೆ ಯಲ್ಲವ್ವ ದುರಗಣ್ಣವರ, ನಿಗಮದ ಅಧ್ಯಕ್ಷ ರವಿಕುಮಾರ ಬೋವಿ, ಸರಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ರವಿ ಗುಂಜಿಕರ, ಡಾ. ಬಸವರಾಜ ಬಳ್ಳಾರಿ, ರಮೇಶ ಪಾತ್ರೋಟ, ಹುಚ್ಚಪ್ಪ ಸಂದಕದ, ಪುರಸಭೆ ಮಾಜಿ ಅಧ್ಯಕ್ಷೆ ಜಯಕ್ಕ ಕಳ್ಳಿ, ನಿರ್ಮಲಾ ಬರದೂರ, ಹೊನ್ನಪ್ಪ ವಡ್ಡರ, ಅರ್ಜುನ ಹಂಚಿನಮನಿ, ನೀಲಪ್ಪ ಶರಸೂರಿ, ಲೋಕೇಶ ಸುತಾರ, ಬೀಮಣ್ಣ ಯಂಗಾಡಿ, ತಾಲೂಕ ಅಧ್ಯಕ್ಷ ರಾಜು ಕಳ್ಳಿ, ಮಲ್ಲೇಶ ವಡ್ಡರ ಹಾಗೂ ಪದಾಧಿಕಾರಿಗಳು ಸೇರಿದಂತೆ ಭೋವಿ ಸಮಾಜದ ಲಕ್ಷ್ಮೇಶ್ವರ ಸೇರಿ ವಿವಿಧ ತಾಲೂಕಿನ ಮುಖಂಡರು, ದಾನಿಗಳು ಇದ್ದರು.

ಎಫ್.ಎಚ್. ಮುದಗಲ್ ಸ್ವಾಗತಿಸಿದರು, ಐ.ಎಚ್. ಮುದಗಲ್ ನಿರೂಪಿಸಿದರು. ಸಭಾ ಕಾರ್ಯಕ್ರಮಕ್ಕೂ ಮುನ್ನ ಪಟ್ಟಣದ ಮುಖ್ಯ ಮಾರ್ಗದಲ್ಲಿ ಸಿದ್ಧರಾಮೇಶ್ವರರ ಭಾವಚಿತ್ರದ ಮೆರವಣಿಗೆ ನೂರಾರು ಮುತ್ತೈದೆಯರ ಪೂರ್ಣಕುಂಭ, ಚಂಡಿಮೇಳ, ಗೊಂಬೆ ಕುಣಿತದೊಂದಿಗೆ ಅದ್ದೂರಿಯಾಗಿ ನೆರವೇರಿತು.

ದೊಡ್ಡ ರಾಜಕೀಯ ಪಕ್ಷದ ಮುಖಂಡರು ಭೋವಿ, ಲಮಾಣಿ ಸಮಾಜ ಎಸ್‌ಸಿ ಮೀಸಲಾತಿಯಿಂದ ತೆಗೆದುಹಾಕುವಂತೆ ಸುಪ್ರಿಂಕೋರ್ಟ್ ಮೊರೆಹೋಗಿದ್ದರು. ಮೈಸೂರು ಮಹಾರಾಜ ಕಾಲದಲ್ಲಿ, ಸ್ವತಂತ್ರಪೂರ್ವ ಹಾಗೂ ಸಂವಿಧಾನ ರಚನೆ ಪೂರ್ವದಲ್ಲಿಯೇ ಭೋವಿ ಸೇರಿ ಇತರೇ 6 ಸಮಾಜಕ್ಕೆ ಮಿಸಲಾತಿ ಇತ್ತು. ಶ್ರೀಶೈಲ ಮಲ್ಲಿಮಾರ್ಜುನನ ಆಶೀರ್ವಾದ ಪಡೆದ ಅವರು ಬಾಲ್ಯದಲ್ಲಿಯೇ ವಯಸ್ಸಿಗೆ ಮೀರಿ ಜ್ಞಾನ ಹೊಂದಿ ತಮ್ಮ ಜೀವನಾನುಭವದಿಂದ ಜೀವನಕ್ಕೆ ಸ್ಫೂರ್ತಿಯಾಗುವ 63 ಸಾವಿರ ವಚನಗಳನ್ನು ಬರೆದಿದ್ದಾರೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

# ಬೃಹತ್ ರಕ್ತದಾನ ಶಿಬಿರ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಅಖಿಲ ಭಾರತ ಔಷಧ ವ್ಯಾಪಾರಸ್ಥರ ಸಂಘದ ಸುವರ್ಣ ಮಹೋತ್ಸವ ಸಂಭ್ರಮಾಚರಣೆಯ ಅಂಗವಾಗಿ ಜ. 24ರಂದು ದೇಶದಾದ್ಯಂತ ಏಕಕಾಲಕ್ಕೆ ಬೃಹತ್ ರಕ್ತದಾನ ಶಿಬಿರ ಏರ್ಪಡಿಸಲು ಕರೆನೀಡಿದ ಪ್ರಯುಕ್ತ ಗದಗ ಜಿಲ್ಲಾ ಔಷಧ ವ್ಯಾಪಾರಿಗಳ ಸಂಘವು ಜ. 24ರಂದು ಮುಂಜಾನೆ 10ರಿಂದ ಸಂಜೆ 5 ಗಂಟೆಯವರೆಗೆ ಕಳಸಾಪೂರ ರಿಂಗ್ ರಸ್ತೆ ಹತ್ತಿರದ ಸೇವಾಲಾಲ ನಗರದ ರೋಟರಿ ಗದಗ ಸೆಂಟ್ರಲ್ ಸಭಾಂಗಣದಲ್ಲಿ ಬೃಹತ್ ರಕ್ತದಾನ ಶಿಬಿರ ಏರ್ಪಡಿಸಿದೆ.




ಸಂಸದ ಬಸವರಾಜ ಬೊಮ್ಮಾಯಿ ಶಿಬಿರದ ಉದ್ಘಾಟನೆ ನೆರವೇರಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಗದಗ ಜಿಮ್ಸ್ ನಿರ್ದೇಶಕ ಬಸವರಾಜ ಬೊಮ್ಮನಹಳ್ಳಿ, ಗದಗ ವೃತ್ತದ ಸಹಾಯಕ ಔಷಧ ನಿಯಂತ್ರಕ ನೀಲಕಂಠ ರಾಠೋಡ, ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ತಾತನಗೌಡ ಪಾಟೀಲ ಆಗಮಿಸುವರು.

ಸಮಾರಂಭದ ಅಧ್ಯಕ್ಷತೆಯನ್ನು ಸಂಘದ ಅಧ್ಯಕ್ಷ ರಾಮನಗೌಡ ದಾನಪ್ಪಗೌಡ್ರ ವಹಿಸುವರು. ಗದಗ ಜಿಲ್ಲಾ ಔಷಧ ವ್ಯಾಪಾರಿಗಳ ಸಂಘದ ಸರ್ವ ಪದಾಧಿಕಾರಿಗಳು, ಸಮಸ್ತ ಸದಸ್ಯರು ಸೇರಿದಂತೆ ಜಿಲ್ಲೆಯ ಮಹಾಜನತೆ ಈ ಬೃಹತ್ ರಕ್ತದಾನ ಶಿಬಿರದಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕೆಂದು ಸಂಘದ ಕಾರ್ಯದರ್ಶಿ ಜ್ಞಾನೇಶ್ವರ ಖೋಕಲೆ ವಿನಂತಿಸಿದ್ದಾರೆ.

# ಬಿ.ಕಾಂ 2ನೇ ಸೆಮಿಸ್ಟರ್ ಪರೀಕ್ಷೆ ಫಲಿತಾಂಶ



■ ವಿಜಯಸಾಕ್ಷಿಸುದ್ದಿ, ಗದಗ

ನಗರದ ಮನೋರಮಾ ಮಹಾವಿದ್ಯಾಲಯದ ಶೈಕ್ಷಣಿಕ ಸಾಲಿನ ಬಿ.ಕಾಂ ಕೋರ್ಸ್‌ನ 2ನೇ ಸೆಮಿಸ್ಟರ್ ಪರೀಕ್ಷೆಯಲ್ಲಿ ಮಹಾವಿದ್ಯಾಲಯದ ವಿದ್ಯಾರ್ಥಿಗಳಾದ ಸುನೇನಾ ಕಡಕೋಲ್ 699 ಅಂಕ ಪಡೆದು ಪ್ರಥಮ ಸ್ಥಾನ, ಸಂಜನಾಕ್ಷಯ ಕುರಾ 697 ಅಂಕ ಪಡೆದು ದ್ವಿತೀಯ ಸ್ಥಾನ, ಹಾಗೂ ಫೈನಾನ್ಸಿಯಲ್ ಅಂಕೌಂಟಿಂಗ್ ವಿಷಯದಲ್ಲಿ 100ಕ್ಕೆ 100 ಅಂಕ ಪಡೆದಿದ್ದಾಳೆ.

ಶ್ರಾವಣಿ ಖಾನಾಪುರ 667 ಅಂಕ ಪಡೆದು ತೃತೀಯ ಸ್ಥಾನ, ಮಧು ಹಾದಿಮನಿ 665 ಅಂಕ ಪಡೆದು 4ನೇ ಸ್ಥಾನ, ವೈಭವ ಯಜಮಾನ 661 ಅಂಕ ಪಡೆದು 5ನೇ ಸ್ಥಾನ ಪಡೆದಿದ್ದಾರೆ. ಪ್ರಿಯಾಂಕಾ ರಾಯಕರ ಫೈನಾನ್ಸಿಯಲ್ ಅಕೌಂಟಿಂಗ್ ವಿಷಯದಲ್ಲಿ 100ಕ್ಕೆ 100 ಅಂಕ ಪಡೆದಿದ್ದಾಳೆ.


ಮಹಾವಿದ್ಯಾಲಯಕ್ಕೆ ಕೀರ್ತಿ ತಂದ ವಿದ್ಯಾರ್ಥಿಗಳ ಸಾಧನೆಯನ್ನು ಸಂಸ್ಥೆಯ ಚೇರಮನ್ ಎನ್.ಎಮ್. ಕುಡತರಕರ, ಪ್ರಾಚಾರ್ಯ ಬಿ.ಎಸ್. ಹಿರೇಮಠ, ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ಸಂಸ್ಥೆಯ ಕಾರ್ಯದರ್ಶಿ ಮಂಜುನಾಥ ಕುಡತರಕರ, ಸಂಸ್ಥೆಯ ನಿರ್ದೇಶಕರಾದ ಸಂಜಯ ಕುಡತರಕರ, ಚೇತನ ಕುಡತರಕರ, ಸಂಯೋಜಕರಾದ ಪ್ರೊ. ಅಲ್ವೀನಾ ಡಿ ಹಾಗೂ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

# ರಾಜ್ಯಮಟ್ಟದ ಚಿತ್ರಕಲಾ ಸ್ಪರ್ಧೆಯಲ್ಲಿ ಪ್ರಥಮ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಒಡೆಯರ ಮಲ್ಲಾಪುರದ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ವಿದ್ಯಾರ್ಥಿ ಉಮೇಶ ಪೂಜಾರ ಗುರುವಾರ ಕಲಬುರ್ಗಿಯಲ್ಲಿ ನಡೆದ ರಾಜ್ಯಮಟ್ಟದ ಪ್ರಾಚ್ಯ ಪ್ರಜ್ಞೆ ಚಿತ್ರಕಲಾ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದಿದ್ದಾನೆ.

ಪುರಾತತ್ವ ಸಂಗ್ರಹಾಲಯಗಳು ಮತ್ತು ಪಾರಂಪರಿಕ ಇಲಾಖೆ ಮೈಸೂರು ಇವರ ವತಿಯಿಂದ ಕಲಬುರ್ಗಿಯ ಡಾ. ಬಿ.ಆರ್. ಅಂಬೇಡ್ಕರ್ ವಿಶ್ವವಿದ್ಯಾಲಯದಲ್ಲಿ ನಡೆದ ರಾಜ್ಯ ಮಟ್ಟದ ಪ್ರಾಚ್ಯ ಪ್ರಜ್ಞೆ ಚಿತ್ರಕಲಾ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನದ ಪ್ರಶಸ್ತಿ ಪ್ರಮಾಣ ಪತ್ರದ ಜತೆಗೆ ರೂ. 20 ಸಾವಿರ ನಗದು ಬಹುಮಾನ ಪಡೆದುಕೊಂಡಿರುತ್ತಾನೆ.




ಈ ಸಂದರ್ಭದಲ್ಲಿ ಪುರಾತತ್ವ ಸಂಗ್ರಹಾಲಯಗಳು ಮತ್ತು ಪಾರಂಪರಿಕ ಇಲಾಖೆಯ ನಿರ್ದೇಶಕ ಹಾಗೂ ಆಯುಕ್ತ ದೇವರಾಜು ಎ, ಪ್ರಾಚಾರ್ಯೆ ಡಿ.ಸಿ. ನರೇಗಲ್, ಚಿತ್ರಕಲಾ ಶಿಕ್ಷಕ ಪ್ರವೀಣ ಎಂ.ಗಾಯಕರ ಸೇರಿ ಹಲವರಿದ್ದರು. ಜಿಲ್ಲೆಗೆ ಕೀರ್ತಿ ತಂದ ವಿದ್ಯಾರ್ಥಿಗೆ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ, ಡಿಡಿಪಿಐ ಆರ್.ಎಸ್. ಬುರಡಿ ಹಾಗೂ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಶಿಕ್ಷಕ ವೃಂದದವರು ಹರ್ಷ ವ್ಯಕ್ತಪಡಿಸಿದ್ದಾರೆ.

# ಆಕಸ್ಮಿಕ ಬೆಂಕಿಗೆ ಗುಡಿಸಲು ಭಸ್ಮ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಬಾಲೆಹೊಸೂರ ಗ್ರಾಮದ ಹೊರವಲಯದ ಗುಡಿಸಲಿಗೆ ಆಕಸ್ಮಿಕ ಬೆಂಕಿ ಹೊತ್ತಿಕೊಂಡು ಗುಡಿಸಲು ಸಂಪೂರ್ಣ ಕರಕಲಾದ ಘಟನೆ ಜರುಗಿದೆ.

ಗ್ರಾಮದ ರೈತ ಮಂಜಪ್ಪ ತಿಪ್ಪಣ್ಣ ಹುಚ್ಚಣ್ಣನವರ ಅವರಿಗೆ ಸೇರಿದ ಗುಡಿಸಲಿಗೆ ಮಧ್ಯಾಹ್ನ ಹೊತ್ತಿಕೊಂಡಿದ್ದ ಆಕಸ್ಮಿಕ ಬೆಂಕಿಯಿಂದ ಗುಡಿಸಲಿನಲ್ಲಿದ್ದ ಸಿಲಿಂಡರ್ ಸ್ಫೋಟಗೊಂಡು ಧವಸಧಾನ್ಯ, ಗೃಹ ಬಳಕೆ ವಸ್ತುಗಳು, ಬಟ್ಟೆ–ಬರೆ, 50 ಸಾವಿರ ನಗದು, 20 ಗ್ರಾಂ ಬಂಗಾರ ಇತರೇ ವಸ್ತುಗಳು ಸೇರಿ ಅಪಾರ ಪ್ರಮಾಣದ ವಸ್ತುಗಳು ಬೆಂಕಿಗಾಹುತಿಯಾಗಿವೆ. ಅದೃಷ್ಟವಶಾತ್ ಯಾವುದೇ ಪ್ರಾಣಹಾನಿಯಾಗಿಲ್ಲ. ಜಮೀನಿನಲ್ಲಿಯೇ ತಗಡಿ ಶೆಡ್ ನಿರ್ಮಿಸಿಕೊಂಡು ವಾಸಿಸುತ್ತಿದ್ದ ಮಂಜಪ್ಪನ ಕುಟುಂಬ ಇದೀಗ ಬೀದಿಗೆ ಬಿದ್ದಿದೆ. ಘಟನಾ ಸ್ಥಳಕ್ಕೆ ಪಿಡಿಓ ಶೇಖರಗೌಡ ವಡಕನಗೌಡ್ರ, ಗ್ರಾಮ ಸಹಾಯಕ ಮಲೀಕ ಪಿಂಜಾರ ಭೇಟಿ ನೀಡಿ ಪರಿಶೀಲಿಸಿ, ವರದಿ ಸಲ್ಲಿಸಿದ್ದಾರೆ.

ಮುಂದೇನು ಎಂಬ ಚಿಂತೆಯಲ್ಲಿರುವ ಕುಟುಂಬಕ್ಕೆ ತಾಲೂಕಾಡಳಿತ, ಜನಪ್ರತಿನಿಧಿಗಳು ಪರಿಹಾರ ಕಲ್ಪಿಸುವ ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದು ಮಂಜುನಾಥ ಸೀತಮ್ಮನವರ, ರಾಜು ಬೆಂಚಳ್ಳಿ ಮುಂತಾದವರು ಆಗ್ರಹಿಸಿದ್ದಾರೆ.

### ಕೇಳಿದ್ದು ಒಂದು, ಮಾಡಿದ್ದು ಇನ್ನೊಂದು । ದಂಡ, ಪರಿಹಾರ ನೀಡಲು ಆಯೋಗದ ಆದೇಶ

# ಪಾಸ್‌ಪೋರ್ಟ್ ಕಛೇರಿಗೆ ಬಿತ್ತು ಭಾರೀ ದಂಡ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಹುಬ್ಬಳ್ಳಿ ಕೇಶ್ವಾಪೂರ ನಿವಾಸಿ ಮತ್ತು ಅಲ್ಲಿಯ ವ್ಯಾಪಾರಿಯಾದ ಪಂಕೇಶ ಜೈನ್ ತನ್ನ ಹೆಂಡತಿ ಮತ್ತು ಇಬ್ಬರೂ ಅಲ್ಪ ವಹಿ ಮಕ್ಕಳೊಂದಿಗೆ ಅಕ್ಟೋಬರ್–2023ರಲ್ಲಿ ದುಬೈಗೆ ಪ್ರವಾಸ ಹೋಗಲು ತೀರ್ಮಾನಿಸಿ ವಿಮಾನಯಾನದ ಟಿಕೆಟ್ ಖರೀದಿಸಿದ್ದರು. ಅದಕ್ಕಾಗಿ ತನ್ನ ಹಾಗೂ ಹೆಂಡತಿಯ ಪಾಸ್‌ಪೋರ್ಟ್ ತಯಾರಿದ್ದವು. ಇಬ್ಬರೂ ಅಲ್ಪ ವಹಿ ಮಕ್ಕಳ ಪಾಸ್‌ಪೋರ್ಟ್‌ಗಾಗಿ ದೂರುದಾರ ಪಂಕೇಶ ಹುಬ್ಬಳ್ಳಿಯ ಪಾಸ್‌ಪೋರ್ಟ್ ಕಛೇರಿಗೆ ಅರ್ಜಿ ಸಲ್ಲಿಸಿದ್ದರು. ಆಗ ಪರಿಶೀಲನೆಗಾಗಿ ದೂರುದಾರನ ಪಾಸ್‌ಪೋರ್ಟ್‌ನ್ನು ಸದರಿ ಕಛೇರಿಯವರು ಪಡೆದುಕೊಂಡಿದ್ದರು. ಮಕ್ಕಳ ಪಾಸ್‌ಪೋರ್ಟ್ ತಯಾರಿಸಿ ಕೊಡುವಾಗ ದೂರುದಾರ ಪಂಕೇಶ ಅವರ ಪಾಸ್‌ಪೋರ್ಟ್‌ನಲ್ಲಿ ಕ್ಯಾನ್ಸಲೇಷನ್ ಸೀಲ್‌ನ್ನು ಹಾಕಿಕೊಟ್ಟಿದ್ದರು. ಅದನ್ನು ದೂರುದಾರ ಗಮನಿಸಿರಲಿಲ್ಲ. ನಿಗದಿಯಂತೆ 17/10/2023ರಂದು ದೂರುದಾರ ತನ್ನ ಹೆಂಡತಿ ಮತ್ತು ಇಬ್ಬರು ಮಕ್ಕಳೊಂದಿಗೆ ದುಬೈಗೆ ಹೋಗಲು ಮುಂಬೈ ವಿಮಾನ ನಿಲ್ದಾಣಕ್ಕೆ ಹೋದರು. ಅಲ್ಲಿ ತಪಾಸಣೆ ಮಾಡುವಾಗ ದೂರುದಾರರ ಪಾಸ್‌ಪೋರ್ಟ್‌ನಲ್ಲಿ ಕ್ಯಾನ್ಸಲೇಷನ್ ಸೀಲ್ ಹಾಕಿರುವುದು ಕಂಡುಬಂತು. ಆ ಕಾರಣದಿಂದ ದೂರುದಾರನಿಗೆ ವಿಮಾನ ಹತ್ತಲು ಅಲ್ಲಿಯ ಸಿಬ್ಬಂದಿ ಅನುಮತಿಸಲಿಲ್ಲ. ಆಗ ತನ್ನ ಪಾಸ್‌ಪೋರ್ಟ್‌ನಲ್ಲಿ ತಪ್ಪಾಗಿರುವುದನ್ನು ಗಮನಿಸಿ ತಕ್ಷಣ ಹುಬ್ಬಳ್ಳಿಯಲ್ಲಿರುವ ತನ್ನ ಸಂಬಂಧಿಕರನ್ನು ಸಂಪರ್ಕಿಸಿ ಹುಬ್ಬಳ್ಳಿಯ ಪಾಸ್‌ಪೋರ್ಟ್ ಕಛೇರಿಗೆ ಹೋಗಿ ವಿಷಯ ತಿಳಿಸಿದಾಗ ಅವರು ತಮ್ಮಿಂದ ತಪ್ಪಾಗಿರುವುದಾಗಿ ಪಾಸ್‌ಪೋರ್ಟ್ ಇಲಾಖೆಯವರು ಒಪ್ಪಿಕೊಂಡರು.




ತಕ್ಷಣ ಅವರು ಮುಂಬೈ ಪಾಸ್‌ಪೋರ್ಟ್ ಕಛೇರಿಯವರನ್ನು ಸಂಪರ್ಕಿಸಿ ದೂರುದಾರನ ಪಾಸ್‌ಪೋರ್ಟ್ ಸರಿಪಡಿಸಿದರು. ಅದಕ್ಕಾಗಿ ದೂರುದಾರ ರೂ. 11,000 ಖರ್ಚು ಮಾಡಬೇಕಾಯಿತು. 17/10/2023ರಂದು ನಿಗದಿಯಾಗಿದ್ದ ಅವರ ದುಬೈ ಪ್ರವಾಸ ರದ್ದಾಯಿತು. ಮರುದಿವಸ 18/10/2023ರಂದು ದೂರುದಾರ ತನ್ನ ಹೆಂಡತಿ ಮಕ್ಕಳೊಂದಿಗೆ ದುಬೈ ಪ್ರವಾಸ ಕೈಗೊಂಡರು. ಅದರ ಪರಿಣಾಮವಾಗಿ ಪಾಸ್‌ಪೋರ್ಟ್ ಸರಿಪಡಿಸಲು ರೂ.11,000 ಖರ್ಚಾಗಿದೆ, 17/10/2023ರಂದು ಪ್ರವಾಸ ರದ್ದಾಗಿದ್ದರಿಂದ ಮುಂಬೈ ಹೊಟೇಲ್‌ನಲ್ಲಿ ಉಳಿಯಬೇಕಾಗಿದ್ದರಿಂದ ಖರ್ಚಾಗಿದೆ ಮತ್ತು ದುಬೈನಲ್ಲಿನ ನಿಗದಿಯಾಗಿದ್ದ ಪ್ರವಾಸದ ಅವಧಿಯಲ್ಲಿ ಎರಡು ದಿವಸ ಕಡಿತವಾಗಿರುವುದರಿಂದ ಎದುರುದಾರ ಪಾಸ್‌ಪೋರ್ಟ್ ಕಛೇರಿಯವರಿಂದ ತನಗೆ ಸೇವಾ ನ್ಯೂನತೆ ಆಗಿದೆ ಎಂದು ಹೇಳಿ ಎಲ್ಲರ ಪರವಾಗಿ ದೂರುದಾರ ರೂ.25 ಲಕ್ಷ ಪರಿಹಾರ ಕೊಡುವಂತೆ ಕೋರಿ ಗ್ರಾಹಕರ ರಕ್ಷಣಾ ಕಾಯ್ದೆಯಡಿ ಧಾರವಾಡ ಜಿಲ್ಲಾ ಗ್ರಾಹಕರ ಆಯೋಗಕ್ಕೆ 18/04/2024ರಂದು ದೂರು ಸಲ್ಲಿಸಿದ್ದರು.

ಪಾಸ್‌ಪೋರ್ಟ್ ನೀಡುವ ಕೆಲಸದಲ್ಲಿ ಏನಾದರೂ ನ್ಯೂನತೆ ಆದರೆ ಅದರ ಬಗ್ಗೆ ಪಾಸ್‌ಪೋರ್ಟ್ ಕಾಯ್ದೆ ಕಲಂ–16ರಂತೆ ಇಲಾಖೆಯ ಅಧಿಕಾರಿ ವರ್ಗದವರ ಮೇಲೆ ಕ್ರಮ ಕೈಗೊಳ್ಳಲಾಗದು ಎಂದು ದೂರನ್ನು ವಜಾ ಮಾಡುವಂತೆ ಕೋರಿ ಎದುರುದಾರರು ಆಕ್ಷೇಪಣೆ ಹಾಕಿದ್ದರು.

ಸದರಿ ದೂರಿನ ಬಗ್ಗೆ ಕೂಲಂಕುಷವಾಗಿ ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷರಾದ ಈಶಪ್ಪ ಭೂತೆ ಹಾಗೂ ಸದಸ್ಯೆ ವಿಶಾಲಾಕ್ಷಿ ಅ.ಬೋಳಶೆಟ್ಟಿ ಈ ಪ್ರಕರಣದ ಸಂಗತಿಗಳನ್ನು ಅವಲೋಕಿಸಿದಾಗ ದೂರುದಾರರ ಇಬ್ಬರೂ ಮಕ್ಕಳ ಪಾಸ್‌ಪೋರ್ಟ್ ನೀಡುವ ಬಗ್ಗೆ ಅಥವಾ ಸದಸ್ಯೆ ನೀಡುವ ವಿಷಯದಲ್ಲಿ ನ್ಯೂನತೆ ಆಗಿಲ್ಲ. ಆದರೆ 2029ರವರೆಗೆ ಕಾನೂನುಬದ್ಧವಾಗಿದ್ದ ದೂರುದಾರರ ಪಾಸ್‌ಪೋರ್ಟ್ ರದ್ದಾಗಿದೆ ಅನ್ನುವ ಸೀಲ್ ಹಾಕಿರುವುದು ಪಾಸ್‌ಪೋರ್ಟ್ ಇಲಾಖೆಯ ಸಿಬ್ಬಂದಿಯಿಂದ ತಪ್ಪಾಗಿದೆ. ಆ ತಪ್ಪಿನಿಂದ ನಿಗದಿಯಾಗಿದ್ದ ದುಬೈ ಪ್ರವಾಸವನ್ನು ಎಲ್ಲ ದೂರುದಾರರು ಒಂದು ದಿನ ಮುಂದೂಡಬೇಕಾಯಿತು. ಅದಕ್ಕಾಗಿ ಮೊದಲಿನ ದಿನದ ವಿಮಾನ ಟಿಕೇಟು ನಿರುಪಯುಕ್ತವಾಗಿದೆ. ಬೇರೆ ವಿಮಾನ ಟಿಕೇಟ್ ಖರೀದಿಸಲು ಹಣ ಖರ್ಚು ಮಾಡಿದ್ದಾರೆ. ಪಾಸ್‌ಪೋರ್ಟ್ ಸರಿಪಡಿಸಲು ದೂರುದಾರ ರೂ.11,000 ಖರ್ಚು ಮಾಡಿ ಇನ್ನುಳಿದಂತೆ ವಸತಿ ಮತ್ತು ಇತರೇ ಖರ್ಚು ಮಾಡಿರುವುದು ಮೇಲ್ನೋಟಕ್ಕೆ ಸಾಬೀತಾಗಿದೆ. ಈ ಎಲ್ಲ ಕಾರಣಗಳಿಗಾಗಿ ಎದುರುದಾರ ಪಾಸ್‌ಪೋರ್ಟ್ ಇಲಾಖೆಯಿಂದ ದೂರುದಾರರಿಗೆ ಸೇವಾ ನ್ಯೂನತೆ ಆಗಿದೆ ಎಂದು ಅಭಿಪ್ರಾಯಪಟ್ಟು ಈ ಬಗ್ಗೆ ಎದುರುದಾರರು ಎತ್ತಿರುವ ಆಕ್ಷೇಪಣೆಗಳನ್ನು ತಳ್ಳಿಹಾಕಿ ಆಯೋಗ ತೀರ್ಪು ನೀಡಿದೆ.

ದೂರುದಾರರ ಹೆಚ್ಚುವರಿ ವಿಮಾನ ಟಿಕೇಟ್ ವೆಚ್ಚ ರೂ.62,876+ರೂ.11,000 ಪಾಸ್‌ಪೋರ್ಟ್ ಸರಿಪಡಿಸುವ ಖರ್ಚು, ಜೊತೆಗೆ ದೂರುದಾರರಿಗೆ ಆಗಿರುವ ಅನಾನುಕೂಲ, ತೊಂದರೆ ಮತ್ತು ಅವರ ಒಂದು ದಿನದ ವಾಸ್ತವ್ಯದ ಖರ್ಚು ವೆಚ್ಚ ಸೇರಿ ತಲಾ ರೂ.50,000ನಂತೆ ಒಟ್ಟು ರೂ.2 ಲಕ್ಷ ರೂಪಾಯಿ ಪರಿಹಾರ ಹಾಗೂ ರೂ.10,000 ಪ್ರಕರಣದ ಖರ್ಚು ವೆಚ್ಚ ಕೊಡುವಂತೆ ಆಯೋಗ ಎದುರುದಾರರ ಪಾಸ್‌ಪೋರ್ಟ್ ಇಲಾಖೆಗೆ ನಿರ್ದೇಶಿಸಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka